ಬಳ್ಳಾರಿ । ವಿಜಯನಗರ । ಕೊಪ್ಪಳ । ಬೆಂಗಳೂರು । ದಾವಣಗೆರೆ । ಹುಬ್ಬಳ್ಳಿ-ಧಾರವಾಡ । ಹಾವೇರಿ । ಗದಗ । ಬಾಗಲಕೋಟೆ । ವಿಜಯಪುರ । ಕಲಬುರಗಿ । ತುಮಕೂರು

# ಅನಂತ ಜನಶಕ್ತಿ

ಸಂಪಾದಕ: ಎಸ್.ವೆಂಕಟೇಸುಲು
EDITOR : S VENKATESULU

ANANTHA JANA SAKTHI KANNADA DAILY ಕನ್ನಡ ದಿನಪತ್ರಿಕೆ

ಸಂಪುಟ : 01 ಸಂಚಿಕೆ : 44 ರಿ.ನಂ : ಕೆಎನ್‌ಎಎನ್ / 26 / ಎ5487 ಬಳ್ಳಾರಿ ಶನಿವಾರ ದಿನಾಂಕ : 22-08-2026 ಪುಟ : 04 ಬೆಲೆ : 2-00

## ಸಚಿವ ನಾಗೇಂದ್ರ ವಜಾಕ್ಕೆ ಪಟ್ಟು ಬಿಡದ ಬಿಜೆಪಿ;

### ಸದನದಲ್ಲಿ ಭಾರಿ ಗದ್ದಲ; 5ನೇ ದಿನವೂ ಕಲಾಪ ವ್ಯರ್ಥ!

ಬೆಂಗಳೂರು: ವಾಲ್ಮೀಕಿ ನಿಗಮ ಹಗರಣದ ಆರೋಪಿಯಾಗಿರುವ ಸಚಿವ ನಾಗೇಂದ್ರ ಅವರನ್ನು ಸಂಪುಟದಿಂದ ಕೈಬಿಡುವಂತೆ ಆಗ್ರಹಿಸಿ ಬಿಜೆಪಿ ಪ್ರತಿಭಟನೆ ನಡೆಸುತ್ತಿರುವುದರಿಂದ ಸತತ 5 ನೇ ದಿನವೂ ವಿಧಾನಸಭೆ ಕಲಾಪಕ್ಕೆ ಅಡ್ಡಿ ಉಂಟಾಗಿದೆ.

ಸದನ ಆರಂಭವಾದ ತಕ್ಷಣ, ಬಿಜೆಪಿ ಮತ್ತು ಜೆಡಿಎಸ್ ಈ ವಿಷಯವನ್ನು ಪ್ರಸ್ತಾಪಿಸಿ, ನಾಗೇಂದ್ರ ಅವರನ್ನು ಸಂಪುಟದಿಂದ ತಕ್ಷಣವೇ ಕೈಬಿಡಬೇಕೆಂದು ಘೋಷಣೆಗಳನ್ನು ಕೂಗುವ ಮೂಲಕ ಒತ್ತಾಯಿಸಿದರು.

ಪ್ರತಿಭಟನೆಯ ಮಧ್ಯೆ, ಸ್ಪೀಕರ್ ಜಿ.ಎಸ್. ಪಾಟೀಲ್, ಸಚಿವ ಕೆ.ಎಚ್. ಮುನಿಯಪ್ಪ ಅವರನ್ನು ಸದಸ್ಯರ ಪ್ರಶ್ನೆಗಳಿಗೆ ಉತ್ತರಿಸುವಂತೆ ಕೇಳಿಕೊಂಡರು. ನಂತರ ಉಪಸಭಾಪತಿ ಮಂಕಾಳ್ ವೈದ್ಯ ಅವರನ್ನು ಸದನದಲ್ಲಿ ಕೆಲವು ಅರ್ಜಿಗಳು ಮತ್ತು ವರದಿಗಳನ್ನು ಮಂಡಿಸುವಂತೆ ಕೇಳಿದರು.

ನಂತರ ಸ್ಪೀಕರ್ ಸದನದ ಪರಿಗಣನೆ ಮತ್ತು ಅಂಗೀಕಾರಕ್ಕಾಗಿ ಮಸೂದೆಗಳನ್ನು ಕೈಗೆತ್ತಿಕೊಂಡರು.

ಕರ್ನಾಟಕ ಅಪಾರ್ಟ್ಮೆಂಟ್ (ಮಾಲೀಕತ್ವ ಮತ್ತು ನಿರ್ವಹಣೆ) ಮಸೂದೆ, 2026; ಕರ್ನಾಟಕ ಪುರಸಭೆ ನಿಗಮಗಳು (ತಿದ್ದುಪಡಿ)

2ನೇ ಪುಟಕ್ಕೆ...




## ಹದಗೆಟ್ಟ ಭಾರತ-ಬಾಂಗ್ಲಾ ಸಂಬಂಧ; ಸಂದೇಶ ಹಿಂಪಡೆದ ರಾಷ್ಟ್ರಪತಿ ಭವನ!



"ಬಾಂಗ್ಲಾದೇಶ ಪ್ರಧಾನಿಯ ಔಪಚಾರಿಕ ಸ್ವಾಗತಕ್ಕಾಗಿ ಪೂರ್ಣ ಪೂರ್ವಾಭ್ಯಾಸದ ಹಿನ್ನೆಲೆಯಲ್ಲಿ ರಾಷ್ಟ್ರಪತಿ ಭವನದ ಮುಂಭಾಗದಲ್ಲಿ ನಡೆಯಬೇಕಿದ್ದ ಗಾರ್ಡ್ ಬದಲಾವಣೆ ಸಮಾರಂಭ ಈ ಶನಿವಾರ (ಆಗಸ್ಟ್ 22, 2026) ನಡೆಯುವುದಿಲ್ಲ" ಎಂದು ಹೇಳಿದೆ.

ಶೇಖ್ ಹಸೀನಾ ಅವರ ಹಸ್ತಾಂತರದ ವಿಷಯವಾಗಿ ಭಾರತ– ಬಾಂಗ್ಲಾ ನಡುವೆ ರಾಜತಾಂತ್ರಿಕ ಉದ್ವಿಗ್ನತೆ ಹೆಚ್ಚುತ್ತಿದೆ. ಈ ಮಧ್ಯೆ, ಬಾಂಗ್ಲಾದೇಶ ಪ್ರಧಾನಿ ತಾರಿಕ್ ರೆಹಮಾನ್ ಅವರ ಔಪಚಾರಿಕ ಸ್ವಾಗತಕ್ಕಾಗಿ ಪೂರ್ವಾಭ್ಯಾಸದ ಕುರಿತಾದ ಸಂದೇಶ, ಸಂವಹನವನ್ನು ರಾಷ್ಟ್ರಪತಿ ಭವನ ಹಿಂತೆಗೆದುಕೊಂಡಿದೆ. ಇದು ಅವರ ಮುಂಬರುವ ಬ್ರಿಕ್ಸ್ ಶೃಂಗಸಭೆಯ ಭೇಟಿಯ ಬಗ್ಗೆ ಅನಿಶ್ಚಿತತೆಯನ್ನು ಮತ್ತಷ್ಟು ಹೆಚ್ಚಿಸಿದೆ.

2ನೇ ಪುಟಕ್ಕೆ...

## ಶಾಸಕ ಮಂತರ್ ಗೌಡರಿಂದ ಮಡಿಕೇರಿ ದಸರಾಕ್ಕೆ 2 ಕೋಟಿ ಅನುದಾನ



ಮಡಿಕೇರಿ: ಕ್ಷೇತ್ರದ ಶಾಸಕರಾದ ಮಂಥರ್ ಗೌಡರ ನೇತೃತ್ವದಲ್ಲಿ ನಗರ ದಸರಾ ಸಮಿತಿಯಿಂದ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ರವರನ್ನು ಭೇಟಿ ಮಾಡಿ ಮಡಿಕೇರಿ ದಸರಾಕ್ಕೆ ಅನುದಾನ ಕೋರಿಕೆ. ತಕ್ಷಣವೇ ಸ್ಪಂದಿಸಿದ ಮಾನ್ಯ ಮುಖ್ಯಮಂತ್ರಿಗಳು 2 ಕೋಟಿ ರೂ ಘೋಷಣೆ ಮಾಡಿದ್ದಾರೆ. ನಿಯೋಗದಲ್ಲಿ ಮಡಿಕೇರಿ ದಸರಾ ಸಮಿತಿಯ ಉಪಾಧ್ಯಕ್ಷರಾದ ಶ್ರೀ ಮಹೇಶ್ ಜೈನಿ, ದಸರಾ ಕಾರ್ಯಧ್ಯಕ್ಷ ಬಿ ಕೆ ಅರುಣ್ ಕುಮಾರ್, ಪ್ರಧಾನ ಕಾರ್ಯದರ್ಶಿ ಅರುಣ್ ಶೆಟ್ಟಿ, ಖಜಾಂಚಿ ಸಬೀತ ಕಾರ್ಯದರ್ಶಿ ಮುದ್ದುರಾಜ್, ದಶ ಮಂಟಪ ಸಮಿತಿ ಅಧ್ಯಕ್ಷರಾದ ಪೂಣಚ್ಚ, ಪ್ರಧಾನ ಕಾರ್ಯದರ್ಶಿ ವಿನೋದ್ ಪ್ರಕಾಶ್ ಆಚಾರ್ಯ, ಕಾರ್ಯದರ್ಶಿ ಮೋಹನ್ ಗಜೇಂದ್ರ , ಜಗದೀಶ್ ಸೇರಿದಂತೆ ದಸರಾ ಸಮಿತಿಯ ಪದಾಧಿಕಾರಿಗಳು ಹಾಜರಿದ್ದರು.

## ಯೋಜನೆಗಳ ಅನುಷ್ಠಾನಕ್ಕೆ ಕಾಲಮಿತಿ ನಿಗದಿ

### ಇಲಾಖಾ ಅಧಿಕಾರಿಗಳ ಸಭೆಯಲ್ಲಿ ಸಚಿವ ಕೆ.ಎಸ್. ಬಸವಂತಪ್ಪ ನಿರ್ದೇಶನ




ದಾವಣಗೆರೆ: ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆಯ ಸಚಿವರಾಗಿ ಅಧಿಕಾರ ವಹಿಸಿಕೊಂಡ ಬಳಿಕ ಮೊದಲ ಬಾರಿಗೆ ಕೆ.ಎಸ್. ಬಸವಂತಪ್ಪ ಅವರು ಬೆಂಗಳೂರು ವಿಧಾನಸೌಧದಲ್ಲಿರುವ ತಮ್ಮ ಕಚೇರಿಯಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳೊಂದಿಗೆ ಪ್ರಗತಿ ಪರಿಶೀಲನಾ ಸಭೆ ನಡೆಸಿದರು. ಸಭೆಯಲ್ಲಿ ಇಲಾಖೆಯ ಕಾರ್ಯವೈಖರಿ, ವಿವಿಧ ಯೋಜನೆಗಳ ಅನುಷ್ಠಾನದ ಪ್ರಗತಿ ಹಾಗೂ ಬಾಕಿ ಇರುವ ಕಾಮಗಾರಿಗಳ ಕುರಿತು ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆಯ ಅಧಿಕಾರಿಗಳಿಂದ ಸಮಗ್ರ ಮಾಹಿತಿ ಪಡೆದುಕೊಂಡರು.

ಈಗಾಗಲೇ ಇಲಾಖೆಯಲ್ಲಿ ಕೈಗೊಂಡಿರುವ ಎಲ್ಲ ಯೋಜನೆಗಳ ಅನುಷ್ಠಾನದ ಸಮಗ್ರ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸಚಿವರು ಸೂಚಿಸಿದರು. ಯಾವ ಯೋಜನೆ ಯಾವ ಹಂತದಲ್ಲಿದೆ, ಬಾಕಿ ಇರುವ ಕಾಮಗಾರಿಗಳು ಯಾವುವು ಹಾಗೂ ಅವುಗಳನ್ನು ಪೂರ್ಣಗೊಳಿಸಲು ಅಗತ್ಯವಿರುವ

2ನೇ ಪುಟಕ್ಕೆ...

## ನಾಗೇಂದ್ರ ರಾಜೀನಾಮೆ ಬಗ್ಗೆ ನೋಟಿಸ್ ಕೊಟ್ಟು ವಿಪಕ್ಷ ಚರ್ಚೆ ಮಾಡಲಿ: ಡಿಕೆಶಿ

ಬೆಂಗಳೂರು: ವಿಧಾನ ಪರಿಷತ್ ಕಲಾಪ 5ನೇ ದಿನವೂ ಸಚಿವ ನಾಗೇಂದ್ರ ರಾಜೀನಾಮೆಗೆ ಒತ್ತಾಯಿಸಿ ಕಲಾಪ ಬಲಿಯಾಯ್ತು. ವಿಪಕ್ಷಗಳು ಹೋರಾಟ ಮುಂದುವರೆಸಿದ್ರು. ಈ ವೇಳೆ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರು ನಾಗೇಂದ್ರ ರಾಜೀನಾಮೆ ಬಗ್ಗೆ ನೋಟಿಸ್ ಕೊಟ್ಟು ವಿಪಕ್ಷ ಚರ್ಚೆ ಮಾಡಲಿ ಎಂದಿದ್ದಾರೆ.

ಕಲಾಪ ಪ್ರಾರಂಭ ಆದ ಕೂಡಲೇ ಸಭಾಪತಿಗಳು



ಪ್ರಶ್ನೋತ್ತರ ಕಲಾಪ, ಬರ ಸೇರಿ ವಿವಿಧ ವಿಷಯಗಳ ಬಗ್ಗೆ ಚರ್ಚೆ ಆಗಬೇಕು ಅವಕಾಶ ಕೊಡಿ ಅಂತ ಮನವಿ ಮಾಡಿದ್ರು. ಇದಕ್ಕೂ ಒಪ್ಪದ ವಿಪಕ್ಷಗಳು ನಾಗೇಂದ್ರ ರಾಜೀನಾಮೆ ಕೊಡಬೇಕು ಎಂದರು. ಈ ವೇಳೆ ಸಚಿವ ಯು.ಟಿ ಖಾದರ್ ರಾಜ್ಯಪಾಲರು ಪ್ರಮಾಣವಚನ ಬೋಧಿಸಿದ್ದಾರೆ. ಅವರಿಗೆ ಕಾನೂನು ಗೊತ್ತಿಲ್ಲವಾ ಅಂತ ವಿಪಕ್ಷಗಳ ವಿರುದ್ಧ ಗರಂ ಆದ್ರು. ಈ ವೇಳೆ ವಿಪಕ್ಷಗಳು ನಾಗೇಂದ್ರ ರಾಜೀನಾಮೆಗೆ ಘೋಷಣೆ ಶುರು ಮಾಡಿದ್ರು. ಕೈ ಬರಹದ ಪ್ಲೇ ಕಾರ್ಡ್ ಹಿಡಿದು ಘೋಷಣೆ ಮಾಡಿದ್ರು. ಗದ್ದಲ ಗಲಾಟೆ ಮಧ್ಯೆ ಸಭಾಪತಿಗಳು ಪ್ರಶ್ನೋತ್ತರ, ಶೂನ್ಯವೇಳೆ, ಗಮನ ಸೆಳೆಯುವ ಕಲಾಪ ತೆಗೆದುಕೊಂಡು ಮುಗಿಸಿದ್ರು.

ಈ ವೇಳೆ ಸದನದಲ್ಲಿ ಮಾತಾಡಿದ ಸಿಎಂ ಡಿಕೆ ಶಿವಕುಮಾರ್ ಪ್ರಜಾಪ್ರಭುತ್ವದ ವ್ಯವಸ್ಥೆಯಲ್ಲಿ ಹೋರಾಟ ಮಾಡಲಿ. ನಾನು ಹಿಂದೆಯೇ ಪಕ್ಷದ ಅಧ್ಯಕ್ಷ ಆದಾಗ ನಾನೇ ರಾಜೀನಾಮೆ ಕೊಡಿಸಿದ್ದೆ. ತನಿಖೆ ಮಾಡಿಸಿದ್ದೇವೆ. ಆದರೆ ಈಗ ವಿಪಕ್ಷಗಳು ನೋಟಿಸ್ ಕೊಟ್ಟು ಚರ್ಚೆ

2ನೇ ಪುಟಕ್ಕೆ...

## ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಜಗಳೂರಿನಿಂದ ಬಳ್ಳಾರಿಗೆ ಬಿಜೆಪಿ ಪಾದಯಾತ್ರೆ

ಬೆಂಗಳೂರು: ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಬಹುಕೋಟಿ ಅಕ್ರಮ ಹಣ ವರ್ಗಾವಣೆ ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಸಚಿವ ಬಿ. ನಾಗೇಂದ್ರ ಅವರ ರಾಜೀನಾಮೆ ಆಗ್ರಹಿಸಿ ಹಾಗೂ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರವನ್ನು ಖಂಡಿಸಿ ರಾಜ್ಯ ಬಿಜೆಪಿ ಬೃಹತ್ ಪಾದಯಾತ್ರೆ ನಡೆಸಲು ಸಜ್ಜಾಗಿದೆ. ಬಿಜೆಪಿ ಕಚೇರಿಯಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಬಿಜೆಪಿ ನಾಯಕ ಬಿ.

2ನೇ ಪುಟಕ್ಕೆ...



## ಮಾನ್ವಿಯಲ್ಲಿ 700 ವರ್ಷಗಳ ಹಿಂದಿನ ನಿಧಿ ಪತ್ತೆ

ರಾಯಚೂರು: ಮಾನ್ವಿಯ ಅಂದ್ರೂನ್ ಕಿಲ್ಲಾ ಕೋಟೆ ಪ್ರದೇಶದಲ್ಲಿ ಅಚ್ಚರಿ ಘಟನೆಯೊಂದು ಸಂಭವಿಸಿದೆ. ಮನೆ ನಿರ್ಮಾಣಕ್ಕೆ ಮಣ್ಣು ಅಗೆಯುತ್ತಿದ್ದಾಗ ಮಣ್ಣಿನ ಗಡಿಗೆಯಲ್ಲಿ ಸುಮಾರು 700 ವರ್ಷಗಳಷ್ಟು ಹಿಂದಿನ ನಿಧಿ ಪತ್ತೆಯಾಗಿದೆ. ಮಣ್ಣಿನ ಗಡಿಗೆಯಲ್ಲಿ ಸುಮಾರು 700 ವರ್ಷಗಳಷ್ಟು ಹಿಂದಿನ ತಾಮ್ರದ ನಾಣ್ಯಗಳು ಪತ್ತೆಯಾಗಿವೆ. ವಿಜಯನಗರ ಅರಸರು ನಿರ್ಮಿಸಿದ ಕೋಟೆ ಪ್ರದೇಶದಲ್ಲಿ ಒಂದೂವರೆ ಕೆಜಿ ತೂಕದ 360 ನಾಣ್ಯಗಳು ಪತ್ತೆಯಾಗಿವೆ. ನಾಣ್ಯಗಳ ಮೇಲೆ ಉರ್ದು, ಪರ್ಷಿಯನ್, ಅರೇಬಿಕ್ ಭಾಷೆಯ ಬರಹಗಳಿದ್ದು, ಮೇಲ್ನೋಟಕ್ಕೆ ಬಹಮನಿ ಸುಲ್ತಾನರ ಕಾಲದಲ್ಲಿ ಬಳಕೆಯಲ್ಲಿದ್ದ ನಾಣ್ಯಗಳು ಅನ್ನೋ ಮಾಹಿತಿ ಇದೆ. ಶೈಜಾದಿ ಎಂಬುವವರ ಮನೆ ಬುನಾದಿಗೆ ಮಣ್ಣು ತುಂಬಲು ಕೋಟೆ ಪ್ರದೇಶದಲ್ಲಿ ನೆಲ ಅಗೆಯಲಾಗುತ್ತಿತ್ತು.





## ದೇಗುಲದ ಆವರಣದಲ್ಲಿ ಮುಸ್ಲಿಂ ಯುವಕ ಮೂತ್ರ ವಿಸರ್ಜನೆ: ಭುಗಿಲೆದ್ದ ಆಕ್ರೋಶ;

## ಈದ್ ಮಿಲಾದ್ ದಿನವೇ ಶಿಗ್ಗಾಂವಿ ಬಂದ್‌ಗೆ ಕರೆ

ಹಾವೇರಿ : ಜಿಲ್ಲೆಯ ಶಿಗ್ಗಾಂವಿ ಪಟ್ಟಣದ ಐತಿಹಾಸಿಕ ಆಂಜನೇಯ ಸ್ವಾಮಿ ದೇವಾಲಯದ ಆವರಣದಲ್ಲಿ ಅನ್ಯಕೋಮಿನ ಯುವಕನೊಬ್ಬ ಮೂತ್ರ ವಿಸರ್ಜನೆ ಮಾಡಿ ವಿಕೃತಿ ಮೆರೆದಿರುವ ಘಟನೆ ಇದೀಗ ತೀವ್ರ ಸ್ವರೂಪ ಪಡೆದು–ಕೊಂಡಿದ್ದು, ಭಾರಿ ಜನಾಕ್ರೋಶಕ್ಕೆ ಕಾರಣವಾಗಿದೆ. ಈ ದುಷ್ಕೃತ್ಯವನ್ನು ತೀವ್ರವಾಗಿ ಖಂಡಿಸಿರುವ ಶ್ರೀರಾಮಸೇನೆ ಸಂಸ್ಥಾಪಕ ಪ್ರಮೋದ್ ಮುತಾಲಿಕ್, ಈದ್ ಮಿಲಾದ್ ಹಬ್ಬದಂದು (ಆ. 26ರಂದು) ಶಿಗ್ಗಾಂವಿ ಪಟ್ಟಣ ಸಂಪೂರ್ಣ ಬಂದ್‌ಗೆ ಕರೆ ನೀಡಿದ್ದಾರೆ.

ಹಾವೇರಿ ಜಿಲ್ಲೆಯ ಶಿಗ್ಗಾಂವಿ ಪಟ್ಟಣದ ಟ್ಯಾಕ್ಸಿ ಸ್ಟ್ಯಾಂಡ್ ಬಳಿ ಇರುವ ಆಂಜನೇಯ ಮತ್ತು ಬನ್ನಿಮಹಾಕಾಳಿ ದೇವಾಲಯದ ಆವರಣದಲ್ಲಿ ಅನ್ಯಕೋಮಿನ ಯುವಕ ಮೂತ್ರವಿಸರ್ಜನೆ ಮಾಡಿದ್ದಾರೆ. ಇದನ್ನು ಪ್ರಶ್ನೆ ಮಾಡಿದ ಯುವಕರಿಗೆ ನಿಂದಿಸಿರುವ ಆರೋಪ ಕೂಡ ಕೇಳಿಬಂದಿದೆ. ಜಾಫರ್ ಎನ್ನುವವನನ್ನು ಸ್ಥಳೀಯರು ಹಿಡಿದು ಪೊಲೀಸರಿಗೆ ಒಪ್ಪಿಸಿದ್ದಾರೆ. ವಿಕೃತಿ ಮೆರೆದ ಆರೋಪಿ ವಿರುದ್ಧ ಕ್ರಮಕೈಗೊಳ್ಳುವಂತೆ ಸ್ಥಳೀಯರು ಆಗ್ರಹಿಸಿದ್ದಾರೆ.

ಈ ಕುರಿತಾಗಿ ಶಿಗ್ಗಾಂವಿಯಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಶ್ರೀರಾಮಸೇನೆ ಸಂಸ್ಥಾಪಕ ಪ್ರಮೋದ್ ಮುತಾಲಿಕ್, 'ದೇಗುಲದ ಆವರಣದಲ್ಲಿ ಮೂತ್ರ ವಿಸರ್ಜನೆ ಮಾಡಿದವನನ್ನ ಗುಂಡು ಹಾರಿಸಿ ಕೊಲ್ಲಬೇಕು. ಮಸೀದಿ ಒಳಗೆ ಇದೇ ರೀತಿ ಆಗಿದ್ರೆ ಏನು ಮಾಡುತ್ತಿದ್ರಿ? ಹಾವೇರಿಯಲ್ಲಿ ಪದೇಪದೆ ಹಿಂದೂಗಳನ್ನ ಕೆರಳಿಸ್ತಿದ್ದಾರೆ. ಇದಕ್ಕೆ ಕೆಲವು 'ಕೈ' ನಾಯಕರು ಪ್ರೇರಣೆ ಕೊಡುತ್ತಿದ್ದಾರೆ. ಶ್ರೀರಾಮಸೇನೆ, ಹಿಂದೂ



ಸಂಘಟನೆ ವಿರೋಧಿಸುತ್ತವೆ. ಶಾಸಕ ಯಾಸಿರ್ ಖಾನ್

2ನೇ ಪುಟಕ್ಕೆ...

# ಗ್ರಾಮೀಣ ರಸ್ತೆ ಸುಧಾರಣೆಗೆ ಮೊದಲ ಆದ್ಯತೆ: ಸಂಸದೆ ಪ್ರಿಯಾಂಕಾ ಜಾರಕಿಹೊಳಿ



ಹಂದಿಗುಂದ : ಗ್ರಾಮೀಣ ಭಾಗದ ರಸ್ತೆಗಳನ್ನು ಸುಧಾರಿಸುವುದಕ್ಕೆ ಮೊದಲ ಆದ್ಯತೆ ನೀಡಲಾಗುವುದು. ರಸ್ತೆ ಕಾಮಗಾರಿಗಳು ಗುಣಮಟ್ಟದಿಂದ ಕೂಡಿರಬೇಕು ಎಂದು ಚಿಕ್ಕೋಡಿ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಗುತ್ತಿಗೆದಾರರಿಗೆ ಸೂಚಿಸಿದರು.

ಕುಡಚಿ ವಿಧಾನಸಭಾ ಕ್ಷೇತ್ರದ ಪಾಲಬಾವಿ ಗ್ರಾಮದಲ್ಲಿ ಲೋಕೋಪಯೋಗಿ ಇಲಾಖೆಯ ವತಿಯಿಂದ 3.90 ಕೋಟಿ ವೆಚ್ಚದಲ್ಲಿ ಕೈಗೊಳ್ಳಲಾಗುತ್ತಿರುವ ಪಾಲಬಾವಿ, ಸುಲ್ತಾನಪುರ ಹಾಗೂ ಮುಗಳಖೋಡ ರಸ್ತೆ ಕಾಮಗಾರಿಗಳಿಗೆ ಗುರುವಾರ ಗುದ್ದಲಿ ಪೂಜೆ ನೆರವೇರಿಸಿ ಅವರು ಮಾತನಾಡಿದರು. ಪಾಲಬಾವಿ, ಸುಲ್ತಾನಪುರ ಹಾಗೂ ಮುಗಳಖೋಡದಲ್ಲಿ ತಲಾ 400 ಮೀಟರ್ ರಸ್ತೆ ಕಾಮಗಾರಿ ಕೈಗೊಳ್ಳಲಾಗುತ್ತಿದ್ದು, ಕಾಮಗಾರಿಯಲ್ಲಿ ಗುಣಮಟ್ಟಕ್ಕೆ ಯಾವುದೇ ರೀತಿಯ ರಾಜಿ ಮಾಡಿಕೊಳ್ಳಬಾರದು. ನಿಗದಿತ ಅವಧಿಯಲ್ಲಿ ಕಾಮಗಾರಿ ಪೂರ್ಣಗೊಳಿಸುವಂತೆ ಅವರು ಸೂಚಿಸಿದರು.

ಇದಕ್ಕೂ ಮುನ್ನ ಶ್ರೀ ಬರಮಲಿಂಗೇಶ್ವರ ದೇವಸ್ಥಾನಕ್ಕೆ ಭೇಟಿ ನೀಡಿ ದರ್ಶನ ಪಡೆದ ಸಂಸದೆ ಪ್ರಿಯಾಂಕಾ ಜಾರಕಿಹೊಳಿ ಅವರನ್ನು ಗ್ರಾಮಸ್ಥರು ಸ್ವಾಗತಿಸಿದರು.

ಬಳಿಕ ಗ್ರಾಮದ ವಿವಿಧ ಅಭಿವೃದ್ಧಿ ಹಾಗೂ ಮೂಲಸೌಕರ್ಯಗಳ ಬೇಡಿಕೆಗಳನ್ನು ಈಡೇರಿಸುವಂತೆ ಯುವ ಮುಖಂಡರಾದ ಸಾಗರ ಕುರುಬೆಟ್ಟ ಹಾಗೂ ಶಿವಾನಂದ ಕಾಡಶೆಟ್ಟಿ ಮನವಿ ಸಲ್ಲಿಸಿದರು.

ಈ ಸಂದರ್ಭದಲ್ಲಿ ಸಿ.ಸಿ. ಹಿರೇಮಠ, ಸುಭಾಷ ಹಿರೇಮಠ, ರಾಮಣ್ಣ ಗಸ್ತಿ, ಮಹಾಲಿಂಗ ಸಾಯನ್ನವರ, ಕುಮಾರ ಬಾಬಣ್ಣವರ, ಗುತ್ತಿಗೆದಾರ ವಿ.ಎಸ್. ವಾಲಿ, ವಿಠಲ ತಳವಾರ, ಗಿರೆಪ್ಪ ಬಳಿಗಾರ, ಇಲಾಹಿ ಕಾಗವಾಡ, ಫಾರೂಕ್ ಮಿರ್ಜಿ, ಮಾರುತಿ ಗೋಡಿ, ಶಿವಾನಂದ ಕಾಡಶೆಟ್ಟಿ, ಮುಸ್ತಾಕ ಮುಲ್ಲಾ, ರಾಮಪ್ಪ ಕಾಡಶೆಟ್ಟಿ, ಲಕ್ಷ್ಮಣ ಜನವಾಡ, ಪ್ರಭು ಕರೋಶಿ, ಸಾಗರ ಕುರುಬೆಟ್ಟ, ಅರ್ಜುನ ತುಪ್ಪದ, ಸತ್ಯಪ್ಪ ಕಾಡಶೆಟ್ಟಿ, ರಾಮಪ್ಪ ಹೆಗಡೆ ತೇಗೂರ ಸೇರಿದಂತೆ ಕಾರ್ಯಕರ್ತರು ಹಾಗೂ ಗ್ರಾಮಸ್ಥರು ಉಪಸ್ಥಿತರಿದ್ದರು.

# ಕೊಡಗು ಜಿಲ್ಲೆಯಾದ್ಯಂತ ಜಾಬ್ ಕಾರ್ಡ್ ಮೇಳ ಆರಂಭ




ಮಡಿಕೇರಿ :-ಮಹಾತ್ಮಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಬದಲಿಗೆ ನೂತನವಾಗಿ ಜಾರಿಗೆ ಬಂದಿರುವ ವಿಕಸಿತ ಭಾರತ ಗ್ಯಾರಂಟಿ ಫಾರ್ ರೋಜಗಾರ್ ಮತ್ತು ಅಜೀವಿಕ ಮಿಷನ್ ಗ್ರಾಮೀಣ-2026 ಯೋಜನೆಯಡಿ ಜಿಲ್ಲೆಯಾದ್ಯಂತ ಸೆಪ್ಟಂಬರ್ 15ರ ವರೆಗೆ ಒಂದು ತಿಂಗಳ ಕಾಲ ಜಾಬ್ ಕಾರ್ಡ್ ಮೇಳ ನಡೆಯಲಿದೆ ಎಂದು ಕೊಡಗು ಜಿ.ಪಂ. ಸಿಇಒ ಆನಂದ ಪ್ರಕಾಶ್ ಮೀನಾ ಅವರು ತಿಳಿಸಿದ್ದಾರೆ.

ಜಿಲ್ಲೆಯ 102 ಗ್ರಾಮ ಪಂಚಾಯತ್‌ಗಳಲ್ಲಿ ಒಂದು ತಿಂಗಳ ಕಾಲ ಜಾಬ್ ಕಾರ್ಡ್ ಮೇಳ ನಡೆಯಲಿದೆ. ಗ್ರಾಮೀಣ ಜನರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಅವರು ತಿಳಿಸಿದರು.

ವಿಜಿ ಜಿ ರಾಮ್ ಜಿ ಯೋಜನೆಯಡಿಯಲ್ಲಿ ಸಮುದಾಯ ಆಧಾರಿತ ಮತ್ತು ವೈಯಕ್ತಿಕ ಕಾಮಗಾರಿ ಕೈಗೊಳ್ಳಲು ಅವಕಾಶವಿದೆ. ವೈಯಕ್ತಿಕ ಬಾವಿ, ದನದ ಕೊಟ್ಟಿಗೆ, ಕೋಳಿ ಶೆಡ್ ಸೇರಿದಂತೆ ಒಟ್ಟಾರೆ 318 ಕಾಮಗಾರಿಗಳಿಗೆ ಅವಕಾಶವಿದೆ ಎಂದು ತಿಳಿಸಿದರು. ಹಿಂದಿನ ನರೇಗಾ ಯೋಜನೆಯಡಿಯಲ್ಲಿ ಗ್ರಾಮೀಣ ಭಾಗದ ಕುಟುಂಬಕ್ಕೆ ಒಂದು ಆರ್ಥಿಕ ವರ್ಷದಲ್ಲಿ 100 ದಿನಗಳ ಉದ್ಯೋಗ ನೀಡಲಾಗುತ್ತಿತ್ತು, ಇಲ್ಲಿ 125 ದಿನಗಳ ಉದ್ಯೋಗವಕಾಶ ನೀಡಲಾಗುತ್ತಿದೆ ಎಂದು ಅವರು ತಿಳಿಸಿದರು.

ಈಗಾಗಲೇ ಗ್ರಾ.ಪಂ.ಗಳು ನಿಯಮಾನುಸಾರ ಕ್ರಿಯಾಯೋಜನೆ ಸಲ್ಲಿಸಿದ್ದು ಅವುಗಳಿಗೆ ಅನುಮೋದನೆ ನೀಡಲಾಗಿದೆ. ಜಿಲ್ಲೆಯಲ್ಲಿಯೂ ವಿಬಿ ಜಿ ರಾಮ್ ಜಿ ಯೋಜನೆಯಡಿ ಕಾಮಗಾರಿಗಳು ಆರಂಭಗೊಂಡಿದ್ದು ಗ್ರಾಮೀಣ ಜನರಿಗೆ ದಿನವೊಂದಕ್ಕೆ ರೂ. 382 ಕೂಲಿ ನಿಗದಿಪಡಿಸಲಾಗಿದೆ ಎಂದರು.

ನಮೂನೆ-6 ರಲ್ಲಿ ಕೆಲಸಕ್ಕೆ ಬೇಡಿಕೆ ಸಲ್ಲಿಸಿದಲ್ಲಿ 15 ದಿನಗಳ ಒಳಗಾಗಿ ಗ್ರಾ.ಪಂ.ವತಿಯಿಂದ ಉದ್ಯೋಗ ಒದಗಿಸಲಾಗುತ್ತದೆ. ಕೊಡಗಿನ ಗ್ರಾಮೀಣ ಭಾಗದ ಜನರು ಇದರ ಸದುಪಯೋಗ ಪಡೆದುಕೊಳ್ಳುವಂತೆ ತಿಳಿಸಿದರು. ಜಿಲ್ಲೆಯಾದ್ಯಂತ ಜಾಬ್ ಕಾರ್ಡ್ ಮೇಳವನ್ನು ಯಶಸ್ವಿಯಾಗಿ ಹಮ್ಮಿಕೊಳ್ಳುವ ಸಲುವಾಗಿ 5 ತಾಲೂಕುಗಳಿಗೆ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ನೋಡಲ್ ಅಧಿಕಾರಿಗಳನ್ನಾಗಿ ನೇಮಿಸಲಾಗಿದೆ. ಜಾಬ್ ಕಾರ್ಡ್ ಪಡೆದುಕೊಳ್ಳಲು ಹಾಗೂ ಕಾಮಗಾರಿ ಪಡೆಯಲು ಮತ್ತು ವಿಬಿ ಜಿ ರಾಮ್ ಜಿ ಯೋಜನೆಯಡಿಯಲ್ಲಿ ಕೆಲಸ ಪಡೆಯಲು ಗ್ರಾಮೀಣ ಭಾಗದ ಜನರು ತಮ್ಮ ಸಂಬಂಧಪಟ್ಟ ಗ್ರಾಮ ಪಂಚಾಯತ್ ಕಚೇರಿಯನ್ನು ಸಂಪರ್ಕಿಸಬೇಕು ಎಂದು ಮಾಹಿತಿ ನೀಡಿದ್ದಾರೆ.

ವರದಿ: ಪ್ರಿತುನ್ ಪೂವಣ್ಣ

# ಜೈ ಕರುನಾಡು ರಕ್ಷಣಾ ಸಂಘದ ತಾಲೂಕು ಘಟಕಗಳಿಗೆ ನೂತನ ಅಧ್ಯಕ್ಷರ ನೇಮಕ





ಬೆಂಗಳೂರು: ಜೈ ಕರುನಾಡು ರಕ್ಷಣಾ ಸಂಘದ ರಾಜ್ಯ ಸಮಿತಿ, ಬೆಂಗಳೂರು ವತಿಯಿಂದ ಕನ್ನಡ, ನಾಡು, ನುಡಿ, ನದಿ, ಜಲ, ಸಾಂಸ್ಕೃತಿಕ ಹಾಗೂ ಸಾಮಾಜಿಕ ಕ್ಷೇತ್ರಗಳಲ್ಲಿ ಅನವರತವಾಗಿ ಸೇವೆ ಸಲ್ಲಿಸುತ್ತಿರುವ ಶ್ರೀ ಖಂಡಪ್ಪ ಈಶ್ವರಪ್ಪ ನೆಗಳೂರು ಅವರನ್ನು ಸವಣೂರು ತಾಲೂಕು ಅಧ್ಯಕ್ಷರನ್ನಾಗಿ ಹಾಗೂ ಶ್ರೀಮತಿ ಲಲಿತ ಶಿವಯೋಗಿ ಬರಗುಂಡಿಮಠ ಅವರನ್ನು ಸವಣೂರು ಮಹಿಳಾ ಘಟಕದ ತಾಲೂಕು ಅಧ್ಯಕ್ಷರನ್ನಾಗಿ 20 ಆಗಸ್ಟ್ 2026ರಿಂದ ಜಾರಿಗೆ ಬರುವಂತೆ ಗೌರವಪೂರ್ವಕವಾಗಿ ನೇಮಕ ಮಾಡಲಾಗಿದೆ.

ಸಂಘದ ಸಂಸ್ಥಾಪಕ ಹಾಗೂ ರಾಜ್ಯಾಧ್ಯಕ್ಷರಾದ ಅದ. ಎಂ. ಶ್ರೀನಿವಾಸ್ ಕೊಡ್ಲಿ ಅವರು ಈ ನೇಮಕಾತಿಯನ್ನು ಪ್ರಕಟಿಸಿದ್ದು, ನೂತನ ಪದಾಧಿಕಾರಿಗಳು ತಮ್ಮ ದಕ್ಷತೆ, ಪ್ರಾಮಾಣಿಕತೆ ಹಾಗೂ ಸಮಾಜಮುಖಿ ಸೇವೆಯ ಮೂಲಕ ಸಂಘದ ಆಶಯಗಳನ್ನು ಮತ್ತಷ್ಟು ಬಲಪಡಿಸಿ, ಪ್ರಗತಿಯತ್ತ ಮುನ್ನಡೆಯಲಿ ಎಂದು ಶುಭ ಹಾರೈಸಿದ್ದಾರೆ.

ಕನ್ನಡ ನಾಡು, ನುಡಿ, ನದಿ, ಜಲ, ಸಂಸ್ಕೃತಿ ಹಾಗೂ ಸಾಮಾಜಿಕ ಕ್ಷೇತ್ರಗಳ ಸಂರಕ್ಷಣೆ ಮತ್ತು ಅಭಿವೃದ್ಧಿಗಾಗಿ ನೂತನ ಪದಾಧಿಕಾರಿಗಳು ಸಕ್ರಿಯವಾಗಿ ಕಾರ್ಯನಿರ್ವಹಿಸಲಿದ್ದಾರೆ ಎಂದು ಸಂಘದ ಪ್ರಕಟಣೆ ತಿಳಿಸಿದೆ.

## ಅಭಿವೃದ್ಧಿ ಶುಲ್ಕ ಭಾರಿ ಕಡಿತ: ಪ್ರಯಾಣಿಕರಿಗೆ ತಗ್ಗಲಿದೆ ಹೊರೆ

# ಸೆಪ್ಟೆಂಬರ್‌ನಿಂದ ಪರಿಷ್ಕೃತ ದರ ಜಾರಿ

ಮುಂಬೈ (ಪಿಟಿಐ): ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ (ಕೆಐಎ) ಬಳಕೆದಾರ ಅಭಿವೃದ್ಧಿ ಶುಲ್ಕವನ್ನು(ಯುಡಿಎಫ್) ಭಾರಿ ಪ್ರಮಾಣದಲ್ಲಿ ವಿಮಾನ ನಿಲ್ದಾಣಗಳ ಆರ್ಥಿಕ ನಿಯಂತ್ರಣ ಪ್ರಾಧಿಕಾರ (ಎಇಆರ್‌ಎ) ಕಡಿತ ಮಾಡಿದೆ.

ದೇಶೀಯ ಪ್ರಯಾಣಿಕರಿಗೆ 300 ಮತ್ತು ಅಂತರರಾಷ್ಟ್ರೀಯ ಪ್ರಯಾಣಿಕರಿಗೆ 997 ಯುಡಿಎಫ್ ನಿಗದಿಪಡಿಸಲಾಗಿದ್ದು, ಪರಿಷ್ಕೃತ ದರವು ಮುಂದಿನ 5 ವರ್ಷಗಳ ಅವಧಿಗೆ 2031ರ ಮಾರ್ಚ್‌ವರೆಗೆ ಜಾರಿಯಲ್ಲಿರಲಿದೆ. 2026ರ ಸೆಪ್ಟೆಂಬರ್ 1ರಿಂದ ಹೊಸ ದರ ವಿಧಿಸಲಾಗುತ್ತದೆ.

ಈ ಮೊದಲು ವಿಮಾನ ನಿಲ್ದಾಣದಲ್ಲಿ ಮೂಲಸೌಕರ್ಯ ಯೋಜನೆಗಳು ಪೂರ್ಣಗೊಳ್ಳುವ ಮೊದಲೇ ಪ್ರಯಾಣಿಕರಿಂದ ಯುಡಿಎಫ್ ಸಂಗ್ರಹಿಸಲಾಗುತ್ತಿತ್ತು. ಆದರೆ, ವಿಮಾನ ನಿಲ್ದಾಣದ ನಿರ್ವಾಹಕರು ಭರಿಸುವ ವೆಚ್ಚವನ್ನು ಹೆಚ್ಚಿನ ಮೌಲ್ಯದ ಬಂಡವಾಳ ಯೋಜನೆಗಳನ್ನು ಪೂರ್ಣಗೊಳಿಸಿದ ನಂತರವೇ ಪ್ರಯಾಣಿಕರಿಂದ ವಸೂಲಿ ಮಾಡಬಹುದು ಎಂದು ಎಇಆರ್‌ಎ ಹೇಳಿದೆ. ಇದಕ್ಕೆ ಸಂಬಂಧಿಸಿ ಇದೇ ಮೊದಲ ಬಾರಿ ಸರಾಸರಿ ಆದಾಯ ಅಗತ್ಯತೆ (ಎಆರ್‌ಆರ್) ಚೌಕಟ್ಟನ್ನೂ ಜಾರಿಗೊಳಿಸಿದೆ.

ಇದುವರೆಗೆ ದೇಶಿಯ ಪ್ರಯಾಣಿಕರಿಗೆ 500 ಅಭಿವೃದ್ಧಿ ಶುಲ್ಕ ಇತ್ತು. ಎಇಆರ್‌ಎ ಪರಿಷ್ಕೃತ ದರವು ಬೆಂಗಳೂರು ವಿಮಾನ ನಿಲ್ದಾಣದ ನಿರ್ವಾಹಕ ಸಂಸ್ಥೆ ಬಿಐಎಎಲ್ ಪ್ರಸ್ತಾಪಿಸಿರುವ 450ಕ್ಕಿಂತಲೂ ಕಡಿಮೆ ಇದೆ. ಹಾಗೆಯೇ ಅಂತರರಾಷ್ಟ್ರೀಯ ಪ್ರಯಾಣಿಕರಿಗೆ ಅಸ್ತಿತ್ವದಲ್ಲಿರುವ 1,500ಕ್ಕೆ ಬದಲಾಗಿ 997 ದರ ನಿಗದಿಪಡಿಸಲಾಗಿದ್ದು, ಈ ಮೊತ್ತವು ಬಿಐಎಎಲ್ ಪ್ರಸ್ತಾಪಿಸಿರುವ 1,215ಕ್ಕಿಂತಲೂ ಕಡಿಮೆ ಇದೆ.

ಒಂದನೇ ಪುಟದಿಂದ..

## ದೇಗುಲದ ಆವರಣದಲ್ಲಿ ಮುಸ್ಲಿಂ ಯುವಕ ಮೂತ್ರ ವಿಸರ್ಜನೆ: ಭುಗಿಲೆದ್ದ ಆಕ್ರೋಶ;

# ಈದ್ ಮಿಲಾದ್ ದಿನವೇ ಶಿಗ್ಗಾಂವಿ ಬಂದ್‌ಗೆ ಕರೆ

ಪಠಾಣ್ ಏನು ಮಾಡ್ತಿದ್ರಿ' ಎಂದು ಗರಂ ಆದರು.

'ಜಾಫರ್ ಕೃತ್ಯವೆಸಗಿ 'ಇದು ಶಾಸಕರಿಗೆ ನೀಡಿದ ಹುಟ್ಟುಹಬ್ಬದ ಗಿಫ್ಟ್' ಎಂದು ಹೇಳಿಕೆ ನೀಡಿದ್ದಾನೆ. ಶಾಸಕ ಯಾಸಿರ್ ಖಾನ್ ಪಠಾಣ್ ಅವರೇ ಇದಕ್ಕೆ ಏನು ಹೇಳುತ್ತೀರಿ? ಈ ಕೃತ್ಯದಲ್ಲಿ ಕೇವಲ ಒಬ್ಬ ವ್ಯಕ್ತಿಯಲ್ಲದೆ ಸ್ಥಳೀಯ ಮೌಲ್ವಿಗಳು ಹಾಗೂ ನಾಯಕರ ಷಡ್ಯಂತ್ರ ಅಡಗಿದೆ. ಹಾನಗಲ್ ಮೂಲದವರನ್ನು ಅಕ್ರಮವಾಗಿ ಶಿಗ್ಗಾಂವಿಗೆ ಕ-ರೆತಂದು ಮತದಾರರನ್ನಾಗಿ ಮಾಡಲಾಗುತ್ತಿದೆ. ಈ ಇಡೀ ಪ್ರಕರಣದ ಆಳವಾದ ತನಿಖೆಯಾಗಬೇಕು' ಎಂದು ಆಗ್ರಹಿಸಿದರು.

'ಆರೋಪಿಯನ್ನು ಯಾವುದೇ ಕಾರಣಕ್ಕೂ ಜಾಮೀನಿನ ಮೇಲೆ ಬಿಡುಗಡೆ ಮಾಡಬಾರದು ಎಂದು ಜಿಲ್ಲಾಧಿಕಾರಿಗಳು ಮತ್ತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಿಗೆ ಒತ್ತಾಯಿಸುತ್ತೇನೆ. ಹಿಂದೂ ಸಮಾಜ ಯಾವುದೇ ಕೇಸ್ ಅಥವಾ ಪೊಲೀಸ್ ಲಾಠಿ ಏಟಿಗೆ ಹೆದರಬೇಕಿಲ್ಲ, ಹೋರಾಟಗಾರರ ಪರವಾಗಿ ನಾವು ನಿಲ್ಲುತ್ತೇವೆ. ಹಿಂದೂಗಳೇ ಜಾಗೃತರಾಗಿ, ಇಂದು ದೇವಸ್ಥಾನ, ನಾಳೆ ನಿಮ್ಮ ಮನೆಯಲ್ಲಿ ಬಂದು ಮೂತ್ರ, ಮಲ ವಿಸರ್ಜನೆ ಮಾಡುತ್ತಾರೆ, ಗಂಭೀರ ಪರಿಸ್ಥಿತಿ ಇದೆ' ಎಂದರು.

ಇನ್ನು ಹಿಂದೂಗಳ ಮೇಲಿನ ಸರಣಿ ದೌರ್ಜನ್ಯಗಳನ್ನು ಪ್ರಸ್ತಾಪಿಸಿದ ಮುತಾಲಿಕ್, 'ಹಾನಗಲ್‌ನ ನರೇಗಲ್ ಗ್ರಾಮದಲ್ಲಿ ಕಾರಹುಣ್ಣಿಮೆಯಂದು ಪಟಾಕಿ ಸಿಡಿಸಿದ್ದಕ್ಕೆ ಕೊಡಲಿ-ಕುಡುಗೋಲಿನಿಂದ ಹಲ್ಲೆ ನಡೆಸಲಾಯಿತು. ರಟ್ಟಿಹಳ್ಳಿಯಲ್ಲಿ ಪಾನ್ ಅಂಗಡಿ ನಡೆಸುತ್ತಿದ್ದ ಶಿವಾಜಿರಾವ್ ಎಂಬುವವರನ್ನು ಬರ್ಬರವಾಗಿ ಕೊಲೆ ಮಾಡಲಾಯಿತು. ಇಷ್ಟೆಲ್ಲಾ ದೌರ್ಜನ್ಯಗಳು ನಡೆಯಲು ಇದೇನು ತಾಲಿಬಾನ್ ಆಡಳಿತವೇ? ಹಿಂದೂಗಳಿಗೆ ಇಲ್ಲಿ ಬದುಕುವ ಹಕ್ಕಿಲ್ಲವೇ? ಇಂತಹ ಮನಸ್ಥಿತಿ ಇರುವವರು ತಾಲಿಬಾನ್‌ಗೆ ಹೋಗಲಿ. ಇನ್ನು ಮುಂದೆ ಹಿಂದೂ ಸಮಾಜ ಕೈಕಟ್ಟಿ ಕೂರುವುದಿಲ್ಲ' ಎಂದು ಹೇಳಿದ್ದಾರೆ.

ಸದ್ಯ ಹಿಂದೂ ಕಾರ್ಯಕರ್ತರು ಗೋಮೂತ್ರದಿಂದ ಆಂಜನೇಯ ದೇಗುಲ ಸ್ವಚ್ಛಗೊಳಿಸಿದ್ದಾರೆ. ಸ್ವಚ್ಛತಾ ಕಾರ್ಯದಲ್ಲಿ ಮುತಾಲಿಕ್ ಸೇರಿದಂತೆ ಹಿಂದೂ ಸಂಘಟನೆಯ ನೂರಾರು ಕಾರ್ಯಕರ್ತರು ಭಾಗಿಯಾಗಿದ್ದರು. ಸ್ವಚ್ಛತಾ ಕಾರ್ಯದ ಬಳಿಕ ದೇವಸ್ಥಾನದಲ್ಲಿ ವಿಶೇಷ ಪೂಜೆ ಸಲ್ಲಿಸಲಾಗಿದೆ.

## ನಾಗೇಂದ್ರ ರಾಜೀನಾಮೆಗೆ ಆಗ್ರಹಿಸಿ ಜಗಳೂರಿನಿಂದ

# ಬಳ್ಳಾರಿಗೆ ಬಿಜೆಪಿ ಪಾದಯಾತ್ರೆ

ಶ್ರೀರಾಮುಲು, ಪಾದಯಾತ್ರೆಯ ರೂಪುರೇಷೆಗಳ ಬಗ್ಗೆ ಪಕ್ಷದ ಮಟ್ಟದಲ್ಲಿ ತೀವ್ರ ಚರ್ಚೆಗಳು ನಡೆಯುತ್ತಿದ್ದು, ಇನ್ನೆರಡು ದಿನಗಳಲ್ಲಿ ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಅವರು ಅಧಿಕೃತ ದಿನಾಂಕ ಮತ್ತು ವಿವರಗಳನ್ನು ಘೋಷಿಸಲಿದ್ದಾರೆ ಎಂದು ತಿಳಿಸಿದರು.

ದಾವಣಗೆರೆ ಜಿಲ್ಲೆಯ ಜಗಳೂರು ವಿಧಾನಸಭಾ ಕ್ಷೇತ್ರದಿಂದ ಆರಂಭವಾಗಲಿರುವ ಪಾದಯಾತ್ರೆಯು ಬಳ್ಳಾರಿಯವರೆಗೆ ಸಾಗಲಿದ್ದು, ಸುಮಾರು 170 ಕಿಲೋಮೀಟರ್ ವ್ಯಾಪ್ತಿಯನ್ನು ಒಳಗೊಂಡಿರಲಿದೆ. ಈ ಯಾತ್ರೆಯು ಒಟ್ಟು 20 ದಿನಗಳ ಕಾಲ ನಡೆಯಲಿದ್ದು, ಮುಂದಿನ ವಾರಾಂತ್ಯದಲ್ಲಿ ಪಾದಯಾತ್ರೆಗೆ ಚಾಲನೆ ನೀಡಲು ಸಿದ್ಧತೆಗಳು ನಡೆದಿವೆ.

ಜಗಳೂರಿನಲ್ಲಿ ನಡೆಯಲಿರುವ ಉದ್ಘಾಟನಾ ಸಮಾರಂಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ, ವಿಪಕ್ಷ ನಾಯಕರು ಸೇರಿದಂತೆ ರಾಜ್ಯದ ಪ್ರಮುಖ ಮುಖಂಡರು ಭಾಗವಹಿಸಲಿದ್ದು, ಸಹಸ್ರಾರು ಸಂಖ್ಯೆಯಲ್ಲಿ ಜನರನ್ನು ಸೇರಿಸುವ ಗುರಿ ಹೊಂದಲಾಗಿದೆ.

ಇಡೀ 170 ಕಿ.ಮೀ ಉದ್ದದ ಪಾದಯಾತ್ರೆಯ ಸಂಪೂರ್ಣ ಸಂಘಟನೆ ಮತ್ತು ಉಸ್ತುವಾರಿಯನ್ನು ಮಾಜಿ ಸಚಿವ ಶ್ರೀರಾಮುಲು ಅವರೇ ವಹಿಸಿಕೊಳ್ಳಲಿದ್ದಾರೆ.

ಜಗಳೂರಿನಿಂದ ಬಳ್ಳಾರಿಯವರೆಗಿನ ಈ ಪಾದಯಾತ್ರೆಯ ಮಾರ್ಗದಲ್ಲಿ ಸುಮಾರು 11 ಮೀಸಲು ವಿಧಾನಸಭಾ ಕ್ಷೇತ್ರಗಳು ಹಾದುಹೋಗಲಿವೆ.

ವಾಲ್ಮೀಕಿ ನಿಗಮದ ಹಣ ದುರ್ಬಳಕೆ ವಿಚಾರವನ್ನು ನೇರವಾಗಿ ಶೋಷಿತ ಮತ್ತು ಪರಿಶಿಷ್ಟ ಸಮುದಾಯಗಳ ಮನೆ ಬಾಗಿಲಿಗೆ ಕೊಂಡೊಯ್ಯುವ ಮೂಲಕ, ಸರ್ಕಾರದ ವಿರುದ್ಧ ಜನಾಭಿಪ್ರಾಯ ರೂಪಿಸುವುದು ಹಾಗೂ ಈ ಕ್ಷೇತ್ರಗಳಲ್ಲಿ ಪಕ್ಷದ ರಾಜಕೀಯ ಬಲವರ್ಧನೆ ಮಾಡುವ ಲೆಕ್ಕಾಚಾರವನ್ನು ಬಿಜೆಪಿ ಹಾಕಿಕೊಂಡಿದೆ.

# ಸಚಿವ ನಾಗೇಂದ್ರ ವಜಾಕ್ಕೆ ಪಟ್ಟು ಬಿಡದ ಬಿಜೆಪಿ; ಸದನದಲ್ಲಿ ಭಾರಿ ಗದ್ದಲ; 5ನೇ ದಿನವೂ ಕಲಾಪ ವ್ಯರ್ಥ!

ಮಸೂದೆ, 2026; ಮತ್ತು ಕರ್ನಾಟಕ ಪುರಸಭೆಗಳು (ತಿದ್ದುಪಡಿ) ಮಸೂದೆ, 2026 ಗಳನ್ನು ವಿರೋಧ ಪಕ್ಷದ ಪ್ರತಿಭಟನೆಯ ನಡುವೆಯೂ ವಿಧಾನಸಭೆಯು ಯಾವುದೇ ಚರ್ಚೆಯಿಲ್ಲದೆ ಅಂಗೀಕರಿಸಿದ ಮೂರು ಮಸೂದೆಗಳಾಗಿವೆ. ನಂತರ ಸ್ಪೀಕರ್ ಸದಸ್ಯರು ಗಮನ ಸೆಳೆಯುವ ಸೂಚನೆಗಳಿಗೆ ಉತ್ತರಗಳನ್ನು ನೀಡಿದರು ಮತ್ತು ಸದನವನ್ನು ದಿನದ ಮಟ್ಟಿಗೆ ಮುಂದೂಡಿದರು. ಕರ್ನಾಟಕ ಮಹರ್ಷಿ ವಾಲ್ಮೀಕಿ ಎಸ್‌ಟಿ ಅಭಿವೃದ್ಧಿ ನಿಗಮದಲ್ಲಿ ಹಣ ದುರುಪಯೋಗದ ಆರೋಪದ ನಂತರ ಹಿಂದಿನ ಸಿದ್ದರಾಮಯ್ಯ ನೇತೃತ್ವದ ಸಚಿವ ಸಂಪುಟಕ್ಕೆ ರಾಜೀನಾಮೆ ನೀಡಿದ ನಾಗೇಂದ್ರ ಅವರನ್ನು ಆಗಸ್ಟ್ 3 ರಂದು ಡಿ ಕೆ ಶಿವಕುಮಾರ್ ನೇತೃತ್ವದ ಸಚಿವ ಸಂಪುಟಕ್ಕೆ ಸೇರಿಸಲಾಯಿತು.

ಅವರು ಈಗ ಯೋಜನೆ ಮತ್ತು ಅಂಕಿಅಂಶ ಸಚಿವರಾಗಿದ್ದಾರೆ.

ಜುಲೈ 2024 ರಲ್ಲಿ ವಾಲ್ಮೀಕಿ ನಿಗಮ ಹಗರಣ ಪ್ರಕರಣದಲ್ಲಿ ಜಾರಿ ನಿರ್ದೇಶನಾಲಯ ಬಳ್ಳಾರಿ ಶಾಸಕರನ್ನು ಬಂಧಿಸಿತ್ತು ಮತ್ತು ಆ ವರ್ಷ ಅಕ್ಟೋಬರ್‌ನಲ್ಲಿ ಬೆಂಗಳೂರಿನ ವಿಶೇಷ ನ್ಯಾಯಾಲಯ ಅವರಿಗೆ ಜಾಮೀನು ನೀಡಿತು.

ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಇಡಿ ಮತ್ತು ಸಿಬಿಐ ಆರೋಪಪಟ್ಟಿಯಲ್ಲಿ ನಾಗೇಂದ್ರ ಅವರನ್ನು ಹೆಸರಿಸಿದೆ.

# ಯೋಜನೆಗಳ ಅನುಷ್ಠಾನಕ್ಕೆ ಕಾಲಮಿತಿ ನಿಗದಿ

## ಇಲಾಖಾ ಅಧಿಕಾರಿಗಳ ಸಭೆಯಲ್ಲಿ ಸಚಿವ ಕೆ.ಎಸ್. ಬಸವಂತಪ್ಪ ನಿರ್ದೇಶನ

ಕ್ರಮಗಳೇನು ಎಂಬುದರ ಕುರಿತು ಸ್ಪಷ್ಟ ಮಾಹಿತಿ ನೀಡುವಂತೆ ನಿರ್ದೇಶನ ನೀಡಿದರು.

ಬಾಕಿ ಇರುವ ಯೋಜನೆಗಳು ಮತ್ತು ಕಾಮಗಾರಿಗಳನ್ನು ಗುರುತಿಸಿ, ಅವುಗಳನ್ನು ನಿಗದಿತ ಕಾಲಮಿತಿಯೊಳಗೆ ಪೂರ್ಣಗೊಳಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಸರ್ಕಾರದ ಯೋಜನೆಗಳ ಪ್ರಯೋಜನ ಅರ್ಹ ಫಲಾನುಭವಿಗಳಿಗೆ ತ್ವರಿತವಾಗಿ ತಲುಪುವಂತೆ ಅಗತ್ಯ ಕ್ರಮ ಕೈಗೊಳ್ಳಬೇಕು. ಜನರಿಗೆ ಉತ್ತಮ ಸೇವೆ ಒದಗಿಸುವುದು, ದೇವಾಲಯಗಳ ಸಮಗ್ರ ಅಭಿವೃದ್ಧಿಗೆ ಆದ್ಯತೆ ನೀಡುವುದು, ಜನರಿಗೆ ಉಪಯೋಗ ಆಗುವ ಹೊಸ ಹೊಸ ಯೋಜನೆಗಳನ್ನು ರೂಪಿಸಬೇಕು ಹಾಗೂ ಇಲಾಖೆಯ ಕಾರ್ಯಗಳಲ್ಲಿ ಪಾರದರ್ಶಕತೆ ಮತ್ತು ವೇಗವನ್ನು ಹೆಚ್ಚಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಕಾರ್ಯನಿರ್ವಹಿಸಬೇಕು ಎಂದು ಸಚಿವ ಕೆ.ಎಸ್. ಬಸವಂತಪ್ಪ ನಿರ್ದೇಶನ ನೀಡಿದರು. ಸಭೆಯಲ್ಲಿ ಮುಜರಾಯಿ, ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಇಲಾಖೆಯ ಹಿರಿಯ ಅಧಿಕಾರಿಗಳು ಹಾಜರಿದ್ದು, ತಮ್ಮ ತಮ್ಮ ಇಲಾಖೆಗಳಲ್ಲಿ ಜನರಿಗೆ ಒದಗಿಸಬಹುದಾದ ಸೌಲಭ್ಯಗಳ ಬಗ್ಗೆ ಮಾಹಿತಿ ನೀಡಿದರು.

# ನಾಗೇಂದ್ರ ರಾಜೀನಾಮೆ ಬಗ್ಗೆ ನೋಟಿಸ್ ಕೊಟ್ಟು ವಿಪಕ್ಷ ಚರ್ಚೆ ಮಾಡಲಿ: ಡಿಕೆಶಿ

ಮಾಡಲಿ. ಅವರ ಬಳಿ ಏನು ದಾಖಲೆ ಇದೆ. ಸಿಬಿಐ, ಇಡಿ ಅವರು ಏನ್ ಮಾಹಿತಿ ಕೊಟ್ಟರು ಅಂತ ಚರ್ಚೆ ಮಾಡಲಿ. ಚರ್ಚೆ ಮಾಡಲ್ಲ. ನೋಟಿಸ್ ಕೊಟ್ಟಿಲ್ಲ. ಹೀಗೆ ಮಾಡೋದು ಸರಿಯಲ್ಲ, ನೋಟಿಸ್ ಕೊಡಿ ಎರಡು ದಿನ ಚರ್ಚೆ ಮಾಡೋಣ ಎಂದರು. ನಾನು ಯಾಕೆ ನಾಗೇಂದ್ರ ಅವರನ್ನು ಸಂಪುಟಕ್ಕೆ ಸೇರಿಸಿಕೊಂಡೆ ಅಂತ ಹೇಳ್ತೀನಿ. ರಾಹುಲ್ ಮನೆಗೆ ಹೋಯ್ತು ಅಂತ ಹೇಳೋದು ಸರಿಯಲ್ಲ. ಸರ್ಕಾರದ ಮೇಲೆ ಆರೋಪ ಮಾಡೋದು ಸರಿಯಲ್ಲ. ಎರಡು ವರ್ಷ ಅವರನ್ನು ಹೊರಗೆ ಇಟ್ಟಿದ್ವಿ. ನೀವು ಚರ್ಚೆ ಮಾಡಿ. ನಾವು ಚರ್ಚೆ ಮಾಡ್ತೀವಿ ಎಂದು ವಿಪಕ್ಷಗಳಿಗೆ ತಿರುಗೇಟು ಕೊಟ್ಟರು.

ಛಲವಾದಿ ನಾರಾಯಣಸ್ವಾಮಿ ಮಾತಾಡಿ, ನಾಗೇಂದ್ರ ಅವರ ವಯಕ್ತಿಕ ವಿರೋಧಿಗಳು ನಾವಲ್ಲ. ರಾಜೀನಾಮೆ ಕೊಟ್ಟು ಹೊರಗೆ ಇದ್ದರು. ಬೇಲ್ ಮೇಲೆ ಹೊರಗೆ ಇದ್ದಾ-ರೆ. ದೋಷಮುಕ್ತ ಆಗಿಲ್ಲ. ಕೋರ್ಟ್ ಆದೇಶ ಮಾಡಿದ್ರೆ ನೋಡೋಣ. ಖುಖು ಯಾರ ಕೈಯಲ್ಲಿ ಇದೆ ಅಂತ ಗೊತ್ತಿದೆ. ಸರ್ಕಾರಕ್ಕೆ ಇಷ್ಟು ಆತುರವಾಗಿ ಯಾಕೆ ನಾಗೇಂದ್ರ ಅವರನ್ನು ತಗೊಂಡ್ರಿ. ಬೇರೆ ಅವರನ್ನು ತಗೊಳ್ಳಿ. ಕಳಂಕಿತರನ್ನು ಸೇರಿಸಿಕೊಂಡಿರೋದು ಸರಿಯಲ್ಲ. ಚರ್ಚೆ ಮಾಡೋದು ಏನು ಇಲ್ಲ. ಅವರನ್ನು ವಜಾ ಮಾಡಿ ನಾವು ಸಹಕಾರ ಮಾಡ್ತೀವಿ ಎಂದರು.

ಕಾಶಪ್ಪನವರ್ ದಲಿತರನ್ನು ನಿಂದಿಸಿದ್ದಾರೆ. ಮೋದಿ ದೇಶವನ್ನು ಹೊಲಗೇರಿ ಮಾಡಿದ್ದಾರೆ ಅಂತ ಮಾತಾಡಿದ್ದಾರೆ. ಕಾಶಪ್ಪನವರ್ ಅವರನ್ನು ಕೂಡಲೇ ಅರೆಸ್ಟ್ ಮಾಡಬೇಕು. ಅದು ಅಟ್ರಾಸಿಟಿ ಕೇಸ್. ಅವರನ್ನು ಕೂಡಲೇ ಬಂಧನ ಮಾಡಿ, ಅಂತ ಸಿಎಂಗೆ ಛಲವಾದಿ ನಾರಾಯಣಸ್ವಾಮಿ ಒತ್ತಾಯ ಮಾಡಿದರು. ಗದ್ದಲ. ಗಲಾಟೆ ಹಿನ್ನೆಲೆ ಸೋಮವಾರಕ್ಕೆ ಸಭಾಪತಿಗಳು ಕಲಾಪ ಮುಂದೂಡಿಕೆ ಮಾಡಿದ್ರು

# ಗಜೇಂದ್ರಗಡ ರೈತರ ಜಮೀನಿನಲ್ಲಿ ಹೈಟೆನ್ಷನ್ ವಿದ್ಯುತ್ ಲೈನ್ ಸೂಕ್ತ ಪರಿಹಾರಕ್ಕೆ ಒತ್ತಾಯಿಸಿ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಕೆ

ಗದಗ : ಗಜೇಂದ್ರಗಡ ತಾಲೂಕಿನ ವಿವಿಧ ಗ್ರಾಮಗಳ ರೈತರ ಜಮೀನುಗಳಲ್ಲಿ 'ವೀಣಾ & ಕ್ಷೇಮಾ ಎನರ್ಜಿ' ಕಂಪನಿಯು 220kv DC ಹೈಟೆನ್ಷನ್ ವಿದ್ಯುತ್ ಲೈನ್ ಅಳವಡಿಸಿದ್ದು, ಸಂತ್ರಸ್ತ ರೈತರಿಗೆ ಸಿಗಬೇಕಾದ ಸೂಕ್ತ ಪರಿಹಾರ ಧನವನ್ನು ತಕ್ಷಣವೇ ಬಿಡುಗಡೆ ಮಾಡಲು ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಪದಾಧಿಕಾರಿಗಳು ಜಿಲ್ಲಾಧಿಕಾರಿಗಳ ಪರವಾಗಿ ತಹಶೀಲ್ದಾರರಾದ ಎಸ್. ಬಿ. ಶಾವಳಗಿಮಠ ಅವರಿಗೆ ಮನವಿ ಪತ್ರ ಸಲ್ಲಿಸಿದ್ದಾರೆ.

2022–23ನೇ ಸಾಲಿನಲ್ಲಿ ತಾಲೂಕಿನ ಮಾಟರಂಗಿ, ಗೋಗೇರಿ, ಗೌಡಗೇರಿ, ಉಣಚಗೇರಿ ಮತ್ತು ರಾಜೂರ ಸೇರಿದಂತೆ ಹಲವು ಗ್ರಾಮಗಳ ಕೃಷಿ ಜಮೀನುಗಳಲ್ಲಿ ಹೈಟೆನ್ಷನ್ ವಿದ್ಯುತ್ ಗೋಪುರ ಹಾಗೂ ಲೈನ್‌ಗಳನ್ನು ಅಳವಡಿಸಲಾಗಿತ್ತು. ಕಾಮಗಾರಿ ಸಂದರ್ಭದಲ್ಲಿ ಅಪಾರ ಪ್ರಮಾಣದ ಬೆಳೆ ಹಾನಿಯಾಗಿದ್ದು, ಕಂಪನಿಯು ನಿಯಮಾನುಸಾರ ನೀಡಬೇಕಾದ ಬೆಳೆ ನಷ್ಟ ಪರಿಹಾರವಾಗಲಿ ಅಥವಾ ಪ್ರತಿ ಚದರ ಮೀಟರ್‌ಗೆ ನೀಡಬೇಕಾದ ಜಮೀನಿನ ನಷ್ಟ ಪರಿಹಾರವನ್ನಾಗಲಿ ಇದುವರೆಗೆ ಪಾವತಿಸಿಲ್ಲ. ಬಾಕಿ ಪರಿಹಾರಕ್ಕಾಗಿ ಸಂಕಷ್ಟದಲ್ಲಿರುವ ರೈತರು ಕಂಪನಿಯ ಅಧಿಕಾರಿಗಳಿಗೆ ಹಲವಾರು ಬಾರಿ ಮನವಿ ಮಾಡಿದರೂ, ಅವರು ಕನಿಷ್ಠ ಸ್ಪಂದನೆ ನೀಡದೆ ಬೇಜವಾಬ್ದಾರಿ ಪ್ರದರ್ಶಿಸುತ್ತಿದ್ದಾರೆ ಎಂದು ರೈತ ಮುಖಂಡರು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಜಿಲ್ಲಾಧಿಕಾರಿಗಳು ತಕ್ಷಣವೇ ಮಧ್ಯಪ್ರವೇಶಿಸಿ, ನೊಂದ ರೈತರಿಗೆ ಕಂಪನಿಯಿಂದ




ನ್ಯಾಯಯುತ ಪರಿಹಾರ ಕೊಡಿಸಬೇಕು ಎಂದು ಒತ್ತಾಯಿಸಲಾಗಿದೆ. ಒಂದು ವೇಳೆ ಜಿಲ್ಲಾಡಳಿತ ಹಾಗೂ ಕಂಪನಿಯು ರೈತರ ನ್ಯಾಯಯುತ ಬೇಡಿಕೆಗೆ ತಕ್ಷಣ ಸ್ಪಂದಿಸದಿದ್ದರೆ, ಮುಂದಿನ ದಿನಗಳಲ್ಲಿ ಜಿಲ್ಲಾಧಿಕಾರಿಗಳ ಕಚೇರಿಯ ಮುಂದೆ ಉಗ್ರ ಸ್ವರೂಪದ ಧರಣಿ ಸತ್ಯಾಗ್ರಹ ಹಮ್ಮಿಕೊಳ್ಳಲಾಗುವುದು ಎಂದು ನಿಯೋಗವು ಎಚ್ಚರಿಕೆ ನೀಡಿದೆ.

ತಹಶೀಲ್ದಾರ್ ಎಸ್. ಬಿ. ಶಾವಳಗಿಮಠ ಅವರ ಮೂಲಕ ಜಿಲ್ಲಾಧಿಕಾರಿಗಳಿಗೆ ಮನವಿ ಸಲ್ಲಿಸಿದ ಈ ಸಂದರ್ಭದಲ್ಲಿ ಸಂಘಟನೆಯ ಜಿಲ್ಲಾ ಅಧ್ಯಕ್ಷರಾದ ಶಂಕರಗೌಡ ಜಯನಗೌಡ್ರು, ತಾಲೂಕು ಅಧ್ಯಕ್ಷ ಪ್ರವೀಣ ಕರ್ಣೆ, ಗೌರವ ಅಧ್ಯಕ್ಷ ಮಹಾದೇವ ವೇರ್ಣೇಕರ, ಮುಂಡರಗಿ ತಾಲೂಕು ಅಧ್ಯಕ್ಷ ಈರಪ್ಪ ಸಿದ್ನೇಕೊಪ್ಪ, ಜಿಲ್ಲಾ ಕಾರ್ಯಾಧ್ಯಕ್ಷ ರವಿ ವಗ್ಗಣ್ಣವರ, ರೇಷ್ಮೆ ಬೆಳೆಗಾರರ ಸಂಘದ ಉಪಾಧ್ಯಕ್ಷ ಅಂದಪ್ಪ ಅಂಗಡಿ, ಹಾಗೂ ಮುಖಂಡರಾದ ವೀರಭದ್ರ ಪಾಟೀಲ, ಶಂಕರರಾವ ಎಮ್. ಚವಾಣ, ಶರಣಪ್ಪ ಕ. ಹಾದಿಮನಿ, ಸಂಗಪ್ಪ ರುದ್ರಪ್ಪ ನಡಕಟ್ಟಿನ, ರುದ್ರಪ್ಪ ಆರ್. ನಡಕಟ್ಟಿನ, ಬುಡ್ಡಪ್ಪ ಬಸಾಪುರ, ಜಗದೀಶ ಮಂಡಾಲಿ, ರಾಘವೇಂದ್ರ ಚವಾಣ, ಉಮೇಶ ಮಂಡಾಲಿ, ಕಳಕಪ್ಪ ಗುರಿಕಾರ ಸೇರಿದಂತೆ ಹಲವು ಪ್ರಮುಖರು ಉಪಸ್ಥಿತರಿದ್ದರು.

# ಹಿರಿಯೂರಿನ ಐಮಂಗಲ ಬಳಿ ಬಸ್ ಅಪಘಾತ: ಇಬ್ಬರು ಸಾವು; 26 ಮಂದಿಗೆ ಗಾಯ



ಚಿತ್ರದುರ್ಗ, ಆಗಸ್ಟ್ 21: ಖಾಸಗಿ ಬಸ್ ಪಲ್ಟಿಯಾಗಿ ಇಬ್ಬರು ಮೃತಪಟ್ಟಿರುವ ಘಟನೆ ಚಿತ್ರದುರ್ಗ ಜಿಲ್ಲೆ ಹಿರಿಯೂರು ತಾಲೂಕಿನ ಐಮಂಗಲ ಗ್ರಾಮದ ಬಳಿಯ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ನಡೆದಿದೆ. ಬಸ್ ಬೆಂಗಳೂರಿಂದ ಗೋವಾಕ್ಕೆ ತೆರಳುತ್ತಿತ್ತು ಎನ್ನಲಾಗಿದ್ದು, ಅಪಘಾತದಲ್ಲಿ 26 ಮಂದಿ ಗಾಯಗೊಂಡಿದ್ದಾರೆ. ಗಾಯಾಳುಗಳಿಗೆ ಚಿತ್ರದುರ್ಗ ಜಿಲ್ಲಾಸ್ಪತ್ರೆಯಲ್ಲಿ ಚಿಕಿತ್ಸೆ ನೀಡಲಾಗುತ್ತಿದ್ದು, ಐಮಂಗಲ ಠಾಣಾ ವ್ಯಾಪ್ತಿಯಲ್ಲಿ ದುರ್ಘಟನೆ ನಡೆದಿದೆ. ಇನ್ನು ಬಸ್‌ನಲ್ಲಿ ಗೋವಾಕ್ಕೆ ತೆರಳುತ್ತಿದ್ದವರು ಬೆಂಗಳೂರಿನ ಯುನಿವರ್ಸಲ್ ನರ್ಸಿಂಗ್ ಕಾಲೇಜು ವಿದ್ಯಾರ್ಥಿಗಳು ಎಂಬುದು ಗೊತ್ತಾಗಿದೆ. ಬಸ್ ಚಾಲಕ ಗುರು ಪ್ರಸಾದ್ ಮತ್ತು ಕ್ಲೀನರ್ ಶಂಕರ್ ಮೃತದುರ್ದೈವಿಗಳಾಗಿದ್ದಾರೆ. ಬಸ್‌ನಲ್ಲಿ ಒಟ್ಟು 56 ಪ್ರಯಾಣಿಕರು ಇದ್ದರು ಎನ್ನಲಾಗಿದ್ದು, ಆ ಪೈಕಿ ಒಬ್ಬರು ಮೃತಪಟ್ಟಿದ್ದಾರೆ. 26 ಮಂದಿಗೆ ಗಾಯಗಳಾಗಿದ್ದರೆ ಮತ್ತುಳಿದ 28 ಮಂದಿ ಸೇಫ್ ಆಗಿದ್ದಾರೆ ಎಂದು ಚಿತ್ರದುರ್ಗ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ರಂಜಿತ್ ಬಂಡಾರು ಮಾಹಿತಿ ನೀಡಿದ್ದಾರೆ. ಗೋವಾ ಪ್ರವಾಸಕ್ಕೆ ತೆರಳುತ್ತಿದ್ದ ವೇಳೆ ಸಂಭವಿಸಿದ ಭೀಕರ ಬಸ್ ಅಪಘಾತದ ಬಗ್ಗೆ ಗಾಯಗೊಂಡ ವಿದ್ಯಾರ್ಥಿನಿಯೊಬ್ಬರು ಘಟನೆ ನಡೆದ ಕ್ಷಣವನ್ನು ವಿವರಿಸಿದ್ದಾರೆ. ರಾತ್ರಿ ಸುಮಾರು 10:30ರ ವೇಳೆಗೆ ಎಲ್ಲರೂ ಮಲಗಿದ್ದರು. ಏಕಾಏಕಿ ಭಾರಿ ಸದ್ದು ಕೇಳಿಸಿತು. ಬಸ್ ಡಿಕ್ಕಿ ಹೊಡೆದ ತಕ್ಷಣ ಎಲ್ಲರೂ ಕಿರುಚಲು ಆರಂಭಿಸಿದರು. ಬಳಿಕ ಸ್ಥಳೀಯರು ಬಂದು ಬಸ್‌ನ ಗಾಜು ಒಡೆದು ನಮ್ಮನ್ನು ಹೊರಗೆ ಬರಲು ಸಹಾಯ ಮಾಡಿದರು ಎಂದು ವಿದ್ಯಾರ್ಥಿನಿ ತಿಳಿಸಿದ್ದಾರೆ.

# ದೇವರಾಜು ಅರಸು ಸಮಾಜ ಪರಿವರ್ತಕ ಮುಖ್ಯಮಂತ್ರಿ! ತಾಪಂಕಾ ನಿರ್ವಹಣಾಧಿಕಾರಿ ವಸಂತ್ ಕುಮಾರ್



ಕುಣಿಗಲ್ : ಕರ್ನಾಟಕದ ಸಾಮಾಜಿಕ ನ್ಯಾಯದ ಹರಿಕಾರ ಹಾಗೂ ಮಾಜಿ ಮುಖ್ಯಮಂತ್ರಿ ಡಿ ದೇವರಾಜು ಅರಸು ಅವರ 11 ನೇ ಜನ್ಮ ದಿನಾಚರಣೆಯನ್ನು ಆಗಸ್ಟ್ 20ರಂದು ತಾಲೂಕು ಪಂಚಾಯಿತಿ ಸಂಭಾಂಗಣದಲ್ಲಿ ತಾಲೂಕು ಪಂಚಾಯಿತಿ ಮತ್ತು ಸಮಾಜ ಕಲ್ಯಾಣ ಇಲಾಖೆ ಯ ಸಹಯೋಗದಲ್ಲಿ ಅವರ ಭಾವಚಿತ್ರಕ್ಕೆ ಮಾಲಾರ್ಪಣೆ ಮಾಡುವ ಮೂಲಕ ಅರ್ಥಪೂರ್ಣವಾಗಿ ಆಚರಿಸಿದರು.

ಈ ಸಂದರ್ಭದಲ್ಲಿ ತಾ. ಪಂ ಕಾ ನಿರ್ವಹಣಾಧಿಕಾರಿ ವಸಂತಕುಮಾರ್ ಅವರು ಮಾತನಾಡಿ ದೇವರಾಜು ಅರಸು ಅವರು ಉಳುವವನೇ ಒಡೆಯ ಎಂಬ ಕಾನೂನು ತಂದರು ರಾಜ್ಯದಲ್ಲಿ ಭೂ ಸುಧಾರಣಾ ಕಾಯ್ದೆಯನ್ನು ಯಶಸ್ವಿಯಾಗಿ ಜಾರಿಗೆ ತಂದು ಶೋಷಿತ ಹಾಗೂ ಹಿಂದುಳಿದ ವರ್ಗಗಳಿಗೆ ಜಮೀನಿನ ಹಕ್ಕನ್ನು ಒದಗಿಸಿಕೊಟ್ಟ ಧೀಮಂತ ನಾಯಕ ಅರಸು,ಮತ್ತು ಕರ್ನಾಟಕ ರಾಜ್ಯ ಕಂಡ ಅತ್ಯುತ್ತಮ ಮುಖ್ಯಮಂತ್ರಿ ದೇವರಾಜ್ ಅರಸು ಅವರು, ಬಡವರಿಗೆ ಸಾಕಷ್ಟು ಅನುಕೂಲ ಮಾಡಿಕೊಟ್ಟಿದ್ದರು, ಹಿಂದುಳಿದ ವರ್ಗಗಳ ಆಯೋಗದ ರಚನೆ ಮತ್ತು ವರದಿ ಜಾರಿ ಮಾಡಿದ್ದರು, ಗುಡಿಸಲು ನಿವಾಸಿಗಳಿಗೆ ಹಕ್ಕು ಪತ್ರ ಹಾಗೂ ಬಡವರಿಗೆ ಆರ್ಥಿಕ ನೆರವು ನೀಡಿ ಸಮಾಜಮುಖಿ ಕೆಲಸ ಮಾಡಿದ್ದರು, ಮತ್ತು ಹಿಂದುಳಿದ ವರ್ಗಗಳ ಏಳಿಗೆಗೆ ಆವರ ಪರಿಶ್ರಮ ದಿಂದ ರಾಜ್ಯದ ಎಲ್ಲಾ ಜಾತಿಯ ಜನಗಳಿಗೆ ಅನುಕೂಲ ಮಾಡಿಕೊಟ್ಟಂತಹ ಮಹಾನ್ ಪುಣ್ಯಾತ್ಮ.

ಮೈಸೂರು ರಾಜ್ಯಕ್ಕೆ ಕರ್ನಾಟಕ ಎಂದು ಮರು ನಾಮಕರಣ ಮಾಡಿದ ಹೆಗ್ಗಳಿಕೆ ಅರಸು ಅವರಿಗೆ ಸಲ್ಲುತ್ತದೆ ಎಂದು ಅವರ ಆಡಳಿತಾವಧಿಯ ಮಹತ್ವದ ನಿರ್ಧಾರಗಳನ್ನು ನೆನಪಿಸಿಕೊಂಡರು,

ಕಾರ್ಯಕ್ರಮದಲ್ಲಿ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರು ಶಿವಲಿಂಗಯ್ಯ, ಸಿಡಿಪಿಓ ಕಮಲಮ್ಮ, ತಾಲೂಕು ಆರೋಗ್ಯ ಅಧಿಕಾರಿ ಮರಿಯಪ್ಪ,ಪುರಸಭೆ ಮುಖ್ಯಾಧಿಕಾರಿ ರವಿಕುಮಾರ್ ದಲಿತ ಮುಖಂಡರು ಗೌಡಗೆರೆ ವರದರಾಜು, ತಾಲೂಕು ಭಜಂತ್ರಿ ಅಧ್ಯಕ್ಷ ನಾರಾಯಣ್, ಸೇರಿದಂತೆ ಉಪಸ್ಥಿತರಿದ್ದರು.

# ನಕಲಿ ದಾಖಲೆ ಸೃಷ್ಟಿಸಿ ವಂಚನೆಯ ಆರೋಪ; ವಿವಿಧ ಠಾಣೆಗಳಲ್ಲಿ 5 ಪ್ರಕರಣ ದಾಖಲು

# ಎಫ್‌ಡಿಎ ವಿರುದ್ಧ ಸಾಲು ಸಾಲು ಪ್ರಕರಣ

ಕುಣಿಗಲ್: ನಕಲಿ ದಾಖಲಾತಿ ಸೃಷ್ಟಿಸಿ, ಅಕ್ರಮವಾಗಿ ಜಮೀನು ನೋಂದಣಿ ಮಾಡಿದ ಆರೋಪದ ಮೇಲೆ ಹುಲಿಯೂರುದುರ್ಗ ಉಪನೋಂದಣಾಧಿಕಾರಿ ಕಚೇರಿಯ ಪ್ರಥಮ ದರ್ಜೆ ಸಹಾಯಕ (ಎಫ್‌ಡಿಎ) ಕೆ.ರಾಜೇಶ್ ಒಳಗೊಂಡಂತೆ ಎಂಟು ಜನರ ವಿರುದ್ಧ ಗುಬ್ಬಿ ತಾಲ್ಲೂಕಿನ ಸಿ.ಎಸ್.ಪುರ ಠಾಣೆಯಲ್ಲಿ ಸೋಮವಾರ ಪ್ರಕರಣ ದಾಖಲಾಗಿದೆ.

ರಾಜೇಶ್ ವಿರುದ್ಧ ಇದು ಐದನೇ ಪ್ರಕರಣ. ಏಪ್ರಿಲ್‌ನಲ್ಲಿ ಚೇಳೂರು ಮತ್ತು ಶಿರಾ ಪೊಲೀಸ್ ಠಾಣೆ, ಜುಲೈ 28ರಂದು ತಾವರೆಕೆರೆ ಠಾಣೆ, ಆ. 12ರಂದು ಹುಲಿಯೂರುದುರ್ಗ ಠಾಣೆಯಲ್ಲಿ ಇದೇ ರೀತಿಯ ಪ್ರಕರಣಗಳು ದಾಖಲಾಗಿವೆ. ಹತ್ತಾರು ಜನ ರೈತರಿಗೆ ವಂಚಿಸಿದ ಆರೋಪ ಕೇಳಿ ಬಂದಿದೆ.

ಕಂದಾಯ ಸಚಿವರ ತವರು ಜಿಲ್ಲೆಯಲ್ಲಿ ಇಷ್ಟೆಲ್ಲ ಅಕ್ರಮ ನಡೆದರೂ ಆರೋಪಿಗಳ ವಿರುದ್ಧ ಯಾವುದೇ ಕ್ರಮಕೈಗೊಳ್ಳದಿರುವುದು ಸಾರ್ವಜನಿಕ ವಲಯದಲ್ಲಿ ಚರ್ಚೆಗೆ ಕಾರಣವಾಗಿದೆ. ಉಪನೋಂದಣಾಧಿಕಾರಿ ರಜೆಯ ಮೇಲೆ ತೆರಳಿದಾಗ ರಾಜೇಶ್ ಉಸ್ತುವಾರಿ ನೋಡಿಕೊಳ್ಳುತ್ತಿದ್ದರು. ಈ ಸಮಯದಲ್ಲಿ ಒಬ್ಬರ ಹೆಸರಿನಲ್ಲಿದ್ದ

ಜಮೀನನ್ನು ಮತ್ತೊಬ್ಬರ ಹೆಸರಿಗೆ ನೋಂದಣಿ ಮಾಡಿಕೊಡುತ್ತಿದ್ದರು. ಇದಕ್ಕಾಗಿ ಹಣ ಹಣ ಪಡೆ–ಯುತ್ತಿದ್ದರು ಎಂದೂ ಆರೋಪಿಸಲಾಗಿದೆ.

ಗುಬ್ಬಿ ತಾಲ್ಲೂಕಿನ ಕುನ್ನಾಲಾ ಗ್ರಾಮದ ಅಲ್ತಾಫ್ ಹುಸೇನ್ ಎಂಬುವರು ಕೆ.ರಾಜೇಶ್ ಕುಮ್ಮಕ್ಕು, ತಾಂತ್ರಿಕ ಸಹಾಯ ಪಡೆದು ನಮಗೆ ಪಿತ್ರಾರ್ಜಿತವಾಗಿ ಬಂದಿದ್ದ ಜಮೀನನ್ನು ಹೆಸರಿಗೆ ಖಾತೆ ಮಾಡಿ–ಸಿಕೊಂಡಿದ್ದಾರೆ. ಹುಲಿಯೂರುದುರ್ಗ ಉಪನೋಂದಣಾಧಿಕಾರಿ ಕಚೇರಿಯಲ್ಲಿ ಕೆಲಸ ಮಾಡುವ ಮಹಾಂತೇಶ್ ಕಾವೇರಿ ತಂತ್ರಾಂಶದಲ್ಲಿ ನಕಲಿ ದಾಖಲೆ ಅಪ್‌ಲೋಡ್ ಮಾಡಿ, ಕಾನೂನು ಬಾಹಿರವಾಗಿ ಖಾತೆ, ಪಹಣಿ ಮಾಡಿಕೊಟ್ಟಿದ್ದಾರೆ' ಎಂದು ಕುನ್ನಾಲಾದ ಮೊಹ್ಮದ್ ಅಜರುದ್ದೀನ್ ಸಿ.ಎಸ್.ಪುರ ಠಾಣೆಗೆ ದೂರು ನೀಡಿದ್ದಾರೆ. ಜಮೀನಿಗೂ, ಕ್ರಯಪತ್ರದಲ್ಲಿರುವ ಖರೀದಿದಾರರಿಗೂ, ಮಾರಾಟಗಾರರಿಗೂ ಸಂಬಂಧವೇ ಇಲ್ಲ. ನಕಲಿ ದಾಖಲೆ, ಗುರುತಿನ ಚೀಟಿ ಸೃಷ್ಟಿಸಿ, ಕ್ರಯಪತ್ರ ನೋಂದಣಿ ಮಾಡಿಸಿದವರ ವಿರುದ್ಧ ಕ್ರಮಕೈ–ಗೊಳ್ಳುವಂತೆ ಮನವಿ ಮಾಡಿದ್ದಾರೆ. ಅಜರುದ್ದೀನ್ ದೂರು ಆಧರಿಸಿ ಅಲ್ತಾಫ್, ರಾಜೇಶ್, ರಂಗಸ್ವಾಮಿ, ಜಾವಿದ್ ಖಾನ್, ವಹೀದ್ ಉಲ್ಲಾ ಖಾನ್, ಅಬ್ದುಲ್ ಸುಖುರ್, ಖಬೀರ್, ಮಹಾಂತೇಶ್ ವಿರುದ್ಧ ಪ್ರಕರಣ ದಾಖಲಿಸಲಾಗಿದೆ.

ರಾಜೇಶ್ ವಿರುದ್ಧ ಜಿಲ್ಲೆಯ ವಿವಿಧ ಠಾಣೆಗಳಲ್ಲಿ ಪ್ರಕರಣ ದಾಖಲಿಸಲಾಗಿದೆ. ಎಲ್ಲ ಕಡೆಗಳಲ್ಲಿ ನಕಲಿ ದಾಖಲೆ ಸೃಷ್ಟಿಸಿ ವಂಚಿಸಿರುವ ಬಗ್ಗೆ ಅನ್ಯಾಯಕ್ಕೆ ಒಳಗಾದವರು ದೂರು ನೀಡಿದ್ದಾರೆ. ತನಿಖೆಯ ನಂತರ ಮತ್ತಷ್ಟು ವಿವರಗಳು ಲಭ್ಯವಾಗಲಿವೆ' ಎಂದು ಪೊಲೀಸ್ ಮೂಲಗಳು ಮಾಹಿತಿ ನೀಡಿವೆ.

# ಖರ್ಗೆ ಭಾಷಣದ ಬಳಿಕ "ಶುದ್ಧೀಕರಣ" ಹವನ: ಛಲವಾದಿ ಮಹಾಸಭಾದಿಂದ ಜಿಲ್ಲಾಧಿಕಾರಿಗೆ ಮನವಿ

ವಿಜಯನಗರ: ಉತ್ತರಾಖಂಡದ ಹಲ್ವಾನಿ ರಾಮಲೀಲಾ ಮೈದಾನದಲ್ಲಿ ಎಐಸಿಸಿ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಅವರ ಭಾಷಣದ ನಂತರ ನಡೆದಿರುವ "ಶುದ್ಧೀಕರಣ" ಅವಮಾನದ ಘಟನೆಯನ್ನು ಖಂಡಿಸಿ, ಜಾತಿ ತಾರತಮ್ಯ ಮತ್ತು ಅಸ್ಪೃಶ್ಯತೆ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿ ಛಲವಾದಿ ಮಹಾಸಭಾ, ವಿಜಯನಗರ ಜಿಲ್ಲೆ ವತಿಯಿಂದ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು.

ಉತ್ತರಾಖಂಡದ ಹಲ್ವಾನಿಯ ರಾಮಲೀಲಾ ಮೈದಾನದಲ್ಲಿ ಅಖಿಲ ಭಾರತ ಕಾಂಗ್ರೆಸ್ ಸಮಿತಿಯ ರಾಷ್ಟ್ರೀಯ ಅಧ್ಯಕ್ಷ ಹಾಗೂ ರಾಜ್ಯಸಭೆಯ ವಿರೋಧ ಪಕ್ಷದ ನಾಯಕ ಮಲ್ಲಿಕಾರ್ಜುನ ಖರ್ಗೆ ಸಾರ್ವಜನಿಕ ಸಭೆಯನ್ನು ಉದ್ದೇಶಿಸಿ ಭಾಷಣ ಮಾಡಿದ್ದರು. ನಂತರ ಅದೇ ಸ್ಥಳದಲ್ಲಿ ಆ.10ರಂದು "ಶುದ್ಧೀಕರಣ" ಹೆಸರಿನಲ್ಲಿ ಹವನ ನಡೆಸಲಾಗಿದೆ ಎಂಬ ಘಟನೆ ಮಾಧ್ಯಮಗಳಲ್ಲಿ ವರದಿಯಾಗಿದೆ. ಈ ಹವನವನ್ನು ಶ್ರೀರಾಮ ಸೇನಾ ಧರ್ಮಾರ್ಥ ಸೇವಾ ನ್ಯಾಸ್ ಸಂಘಟನೆಯವರು ನಡೆಸಿದ್ದಾರೆ ಎಂದು ವರದಿಗಳಲ್ಲಿ ಉಲ್ಲೇಖಿಸಲಾಗಿದೆ.

ಈ ಘಟನೆ ಅತ್ಯಂತ ಗಂಭೀರವಾದ ಸಾಮಾಜಿಕ ಹಾಗೂ ಸಾಂವಿಧಾನಿಕ ವಿಚಾರವಾಗಿದ್ದು, ಈ ಕುರಿತು ನಿಷ್ಪಕ್ಷಪಾತ ತನಿಖೆ ನಡೆಸಿ, ತಪ್ಪಿತಸ್ಥರ ವಿರುದ್ಧ ಸೂಕ್ತ ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಮನವಿಯಲ್ಲಿ ಒತ್ತಾಯಿಸಲಾಗಿದೆ.

ಒಬ್ಬ ದಲಿತ ಸಮುದಾಯದ ಹಿರಿಯ ರಾಷ್ಟ್ರೀಯ ನಾಯಕರು ಭಾಷಣ ಮಾಡಿದ ನಂತರ ಅವರು ಬಳಸಿದ ವೇದಿಕೆ ಅಥವಾ ಸ್ಥಳವನ್ನು "ಶುದ್ಧೀಕರಿಸುವುದು" ಎಂಬ ರೀತಿಯ ಆಚರಣೆ ನಡೆದಿರುವುದು ಜಾತಿ ಆಧಾರಿತ ತಾರತಮ್ಯ ಮತ್ತು ಅಸ್ಪೃಶ್ಯತೆಯ ಮನೋಭಾವವನ್ನು ಪ್ರತಿಬಿಂಬಿಸುವಂತಿದೆ ಎಂಬ ಆತಂಕ ದಲಿತ ಸಮುದಾಯದಲ್ಲಿ ಮೂಡಿದೆ ಎಂದು ಮನವಿಯಲ್ಲಿ ತಿಳಿಸಲಾಗಿದೆ.

ಭಾರತದ ಸಂವಿಧಾನದ ವಿಧಿ 14 ಸಮಾನತೆಯ ಹಕ್ಕನ್ನು, ವಿಧಿ 15 ಜಾತಿ ಆಧಾರಿತ ತಾರತಮ್ಯವನ್ನು ಹಾಗೂ ವಿಧಿ 17 ಅಸ್ಪೃಶ್ಯತೆಯನ್ನು ಸಂಪೂರ್ಣವಾಗಿ ನಿಷೇಧಿಸುತ್ತದೆ. ಇಂತಹ ಘಟನೆಗಳು ಸಂವಿಧಾನದ ಆಶಯಕ್ಕೆ ವಿರುದ್ಧವಾಗಿದ್ದು, ಸಮಾಜದಲ್ಲಿ ಜಾತಿ




ತಾರತಮ್ಯ ಮತ್ತು ಅಸಮಾನತೆಯನ್ನು ಉತ್ತೇಜಿಸುವ ಅಪಾಯಕಾರಿ ಸಂದೇಶವನ್ನು ನೀಡುವ ಸಾಧ್ಯತೆಯಿದೆ ಎಂದು ತಿಳಿಸಲಾಗಿದೆ.

ಈ ಘಟನೆ ಕುರಿತು ಮಲ್ಲಿಕಾರ್ಜುನ ಖರ್ಗೆ ಅವರು ರಾಜ್ಯಸಭೆಯಲ್ಲಿಯೂ ತಮ್ಮ ನೋವನ್ನು ವ್ಯಕ್ತಪಡಿಸಿದ್ದು, ಘಟನೆ ಕುರಿತು ತನಿಖೆ ನಡೆಸುವುದಾಗಿ ಕೇಂದ್ರ ಸರ್ಕಾರದ ಪರವಾಗಿ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ. ನಡ್ಡಾ ಅವರು ಭರವಸೆ ನೀಡಿದ್ದಾರೆ ಎಂಬುದು ಮಾಧ್ಯಮ ವರದಿಗಳಲ್ಲಿದೆ ಎಂದು ಮನವಿಯಲ್ಲಿ ಉಲ್ಲೇಖಿಸಲಾಗಿದೆ. ಹಲ್ವಾನಿ ರಾಮಲೀಲಾ ಮೈದಾನದಲ್ಲಿ ನಡೆದಿರುವ "ಶುದ್ಧೀಕರಣ" ಹವನದ ಘಟನೆಯನ್ನು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಗಂಭೀರವಾಗಿ ಪರಿಗಣಿಸಿ ನಿಷ್ಪಕ್ಷಪಾತ ತನಿಖೆ ನಡೆಸಬೇಕು. ಈ ಕೃತ್ಯದ ಹಿಂದೆ ಜಾತಿ ಆಧಾರಿತ ತಾರತಮ್ಯ ಅಥವಾ ಅಸ್ಪೃಶ್ಯತೆಯ ಉದ್ದೇಶವಿದೆಯೇ ಎಂಬುದನ್ನು ತನಿಖೆ ಮಾಡಿ, ತಪ್ಪಿತಸ್ಥರು ಕಂಡುಬಂದಲ್ಲಿ ಅನ್ವಯಿಸುವ ಕಾನೂನುಗಳ ಅಡಿಯಲ್ಲಿ ಕಠಿಣ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಲಾಗಿದೆ. ಯಾವುದೇ ವ್ಯಕ್ತಿ ಅಥವಾ ಸಂಘಟನೆ ಕಾನೂನನ್ನು ಕೈಗೆತ್ತಿಕೊಂಡು ಜಾತಿ, ಧರ್ಮ ಅಥವಾ ಸಮುದಾಯದ ಆಧಾರದ ಮೇಲೆ ಮತ್ತೊಬ್ಬರನ್ನು ಅವಮಾನಿಸುವಂತಹ ಕೃತ್ಯಗಳಿಗೆ ಅವಕಾಶ ನೀಡಬಾರದು. ಇಂತಹ ಘಟನೆಗಳು ಕರ್ನಾಟಕ ಸೇರಿದಂತೆ ದೇಶದ ಯಾವುದೇ ಭಾಗದಲ್ಲಿ ಮರುಕಳಿಸದಂತೆ ಜಾತಿ ತಾರತಮ್ಯ ಮತ್ತು ಅಸ್ಪೃಶ್ಯತೆ ವಿರೋಧಿ ಕಾನೂನುಗಳ ಕುರಿತು ಜನಜಾಗೃತಿ ಮೂಡಿಸಬೇಕು ಎಂದು ಮನವಿಯಲ್ಲಿ ಆಗ್ರಹಿಸಲಾಗಿದೆ.

ಪ್ರಜಾಪ್ರಭುತ್ವದಲ್ಲಿ ಪ್ರತಿಯೊಬ್ಬ ನಾಗರಿಕನಿಗೂ ಸಮಾನ ಗೌರವ ಮತ್ತು ಹಕ್ಕುಗಳನ್ನು ಖಾತ್ರಿಪಡಿಸುವ ಮೂಲಕ ಸಂವಿಧಾನದ ಆಶಯಗಳನ್ನು ರಕ್ಷಿಸಲು ಸರ್ಕಾರ ಸೂಕ್ತ ಕ್ರಮ ಕೈಗೊಳ್ಳಬೇಕು. ಅಲ್ಲದೆ, ಮನವಿಯನ್ನು ಸಂಬಂಧಪಟ್ಟ ರಾಜ್ಯ ಹಾಗೂ ಕೇಂದ್ರ ಸರ್ಕಾರದ ಅಧಿಕಾರಿಗಳ ಗಮನಕ್ಕೂ ತಲುಪಿಸಿ, ಘಟನೆಗೆ ಸಂಬಂಧಿಸಿದ ತನಿಖೆಯ ಪ್ರಗತಿ ಮತ್ತು ಕೈಗೊಂಡ ಕ್ರಮಗಳ ಕುರಿತು ಸಾರ್ವಜನಿಕರಿಗೆ ಸ್ಪಷ್ಟ ಮಾಹಿತಿ ನೀಡಬೇಕು ಎಂದು ಒತ್ತಾಯಿಸಲಾಗಿದೆ.

ಮನವಿ ಸಲ್ಲಿಸುವ ಸಂದರ್ಭದಲ್ಲಿ ಛಲವಾದಿ ಮಹಾಸಭಾ ವಿಜಯನಗರ ಜಿಲ್ಲೆ ಜಿಲ್ಲಾ ಅಧ್ಯಕ್ಷ ಅಜ್ಜಯ್ಯ ಹೊಟ್ಟೆರ್, ಪ್ರಧಾನ ಕಾರ್ಯದರ್ಶಿ ಸಿ. ರಮೇಶ, ಉಪಾಧ್ಯಕ್ಷರುಗಳಾದ ಮುನಿಯಪ್ಪ, ರಾಮಕೃಷ್ಣ ಮತ್ತಿಹಳ್ಳಿ, ಕೆಂಚಪ್ಪ, ನಾಗರಾಜ್, ಕೊಟ್ಟೂರು ಪಟ್ಟಣ ಪಂಚಾಯಿತಿ ಮಾಜಿ ಸದಸ್ಯ ಕೆ–ಂಗರಾಜ್, ನರಸಿಂಹಗಿರಿ, ಪ್ರಹ್ಲಾದ್, ವೆಂಕಟೇಶ, ಕಂಚಿಕೇರಿ ಹನುಮಂತಪ್ಪ, ಗುಂಡಗತಿ ಚಂದ್ರಪ್ಪ, ಸುಪುತ್ರ, ನಾಗರಾಜ್, ಸೋಗಿ ಮಹೇಶ್, ಈರಣ್ಣ ಸೇರಿದಂತೆ ವಿಜಯನಗರ ಛಲವಾದಿ ಮುಖಂಡರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# 6 ವರ್ಷದ ಬಾಲಕನಿಗೆ ಕೆನ್ನೆಗೆ ಹೊಡೆದ ಶಿಕ್ಷಕಿ: ತರಗತಿಯಲ್ಲೇ ಮೃತಪಟ್ಟ ವಿದ್ಯಾರ್ಥಿ!

ವಿಶಾಖಪಟ್ಟಣ: ಆಂಧ್ರ ಪ್ರದೇಶದ ವಿಶಾಖಪಟ್ಟಣದ ಖಾಸಗಿ ಶಾಲೆಯೊಂದರಲ್ಲಿ ಅತ್ಯಂತ ದಾರುಣ ಮತ್ತು ಮನಕಲಕುವ ಘಟನೆಯೊಂದು ಗುರುವಾರ ವರದಿಯಾಗಿದೆ.



ತರಗತಿ ಕೊಠಡಿಯಲ್ಲಿ ಶಿಕ್ಷಕಿಯೊಬ್ಬರು ಹೊಡೆದಿದ್ದರಿಂದ ತೀವ್ರ ಭಯಭೀತಗೊಂಡ ಆರು ವರ್ಷದ ವಿದ್ಯಾರ್ಥಿಯೊಬ್ಬ ಪ್ರಜ್ಞೆ ತಪ್ಪಿ ಕುಸಿದು ಬಿದ್ದು ಮೃತಪಟ್ಟ ಘಟನೆ ನಡೆದಿದೆ. ಮೃತ ಬಾಲಕ ಪ್ರಣಯ್ ತೇಜ (6) ಎಂದು ಗುರುತಿಸಲಾಗಿದೆ.

ಘಟನೆಯ ಸಿಸಿಟಿವಿ ದೃಶ್ಯಾವಳಿಗಳು ಸಾಮಾಜಿಕ ಜಾಲತಾಣಗಳಲ್ಲಿ ಹರಿದಾಡುತ್ತಿದ್ದು, ಸಾರ್ವಜನಿಕ ವಲಯದಲ್ಲಿ ತೀವ್ರ ಆಕ್ರೋಶ ವ್ಯಕ್ತವಾಗಿದೆ. ಶಾಲೆಯ ತರಗತಿಯಲ್ಲಿ ಹೋಮ್‌ವರ್ಕ್ ತೋರಿಸಲು ವಿದ್ಯಾರ್ಥಿಗಳು ಶಿಕ್ಷಕಿಯ ಮೇಜಿನ ಬಳಿ ಸಾಲಾಗಿ ನಿಂತಿದ್ದರು. ಈ ವೇಳೆ ಕೈಯಲ್ಲಿ ಸ್ಲೇಟ್ ಹಿಡಿದು ನಿಂತಿದ್ದ ಆರು ವರ್ಷದ ಬಾಲಕ ತೀವ್ರ ಭಯಗ–ೊಂಡು ಕಣ್ಣೀರು ಹಾಕುತ್ತಿದ್ದ. ಶಿಕ್ಷಕಿ ಆತನ ಶಾಲಾ ಸಮವಸ್ತ್ರವನ್ನು ತೆಗೆಯುತ್ತಾ ಗದರಿಸಿದ್ದಾರೆ. ಬಳಿಕ ಬಾಲಕನನ್ನು ಹತ್ತಿರಕ್ಕೆ ಎಳೆದುಕೊಂಡ ಶಿಕ್ಷಕಿ, ಆತನಿಗೆ ಕಪಾಳಮೋಕ್ಷ ಮಾಡಿದ್ದಾರೆ. ಏಟು ಬಿದ್ದ ಮರುಕ್ಷಣವೇ ಬಾಲಕ ತೀವ್ರ ಆಘಾತಕ್ಕೊಳಗಾಗಿ ಶಿಕ್ಷಕಿಯ ತೊಡೆ–ಯ ಮೇಲೆಯೇ ಪ್ರಜ್ಞೆ ತಪ್ಪಿ ಕುಸಿದು ಬಿದ್ದಿದ್ದಾನೆ. ಶಿಕ್ಷಕಿ ಆತನನ್ನು ಎಚ್ಚರಗೊಳಿಸಲು ಯತ್ನಿಸಿದರೂ ಯಾವುದೇ ಚೇತರಿಕೆ ಕಂಡುಬರಲಿಲ್ಲ. ತಕ್ಷಣವೇ ಶಾಲಾ ಸಿಬ್ಬಂದಿ ಬಾಲಕನನ್ನು ಸಮೀಪದ ಆಸ್ಪತ್ರೆಗೆ ಕರೆದೊಯ್ದರಾದರೂ, ಪರೀಕ್ಷಿಸಿದ ವೈದ್ಯರು ಆತ ಈಗಾಗಲೇ ಮೃತಪಟ್ಟಿರುವುದಾಗಿ ಘೋಷಿಸಿದರು. ಶಿಕ್ಷಕಿಯ ಹಲ್ಲೆ ಮತ್ತು ಭೀತಿಯಿಂದ ಉಂಟಾದ ತೀವ್ರ ಮಾನಸಿಕ ಆಘಾತವೇ ಮಗನ ಸಾವಿಗೆ ಕಾರಣ ಎಂದು ಆರೋಪಿಸಿ ಮೃತ ಬಾಲಕನ ಕುಟುಂಬಸ್ಥರು ಹಾಗೂ ಸಂಬಂಧಿಕರು ಶಾಲೆಯ ಎದುರು ಬೃಹತ್ ಪ್ರತಿಭಟನೆ ನಡೆಸಿದರು. ದೌರ್ಜನ್ಯ ಎಸಗಿದ ಶಿಕ್ಷಕಿ ಹಾಗೂ ಶಾಲಾ ಆಡಳಿತ ಮಂಡಳಿಯ ವಿರುದ್ಧ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು

ಘಟನೆಗೆ ತೀವ್ರ ಕಳವಳ ವ್ಯಕ್ತಪಡಿಸಿರುವ ಆಂಧ್ರಪ್ರದೇಶದ ಶಿಕ್ಷಣ ಸಚಿವ ನಾರಾ ಲೋಕೇಶ್, "ಆರು ವರ್ಷದ ಮಗುವಿನ ಸಾವು ಅತ್ಯಂತ ದುಃಖಕರ ಸಂಗತಿ. ಘಟನೆಗೆ ಕಾರಣರಾದ ಶಿಕ್ಷಕಿ ಹಾಗೂ ಶಾಲಾ ಆಡಳಿತ ಮಂಡಳಿಯ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು. ಸಂತ್ರಸ್ತ ಕುಟುಂಬಕ್ಕೆ ಸರ್ಕಾರ ಸಂಪೂರ್ಣ ಬೆಂಬಲವಾಗಿ ನಿಲ್ಲಲಿದೆ" ಎಂದು ಎಕ್ಸ್ ಮೂಲಕ ಸಾಂತ್ವನ ಹೇಳಿದ್ದಾರೆ.

ಅನಂತ ಜನಶಕ್ತಿ



# ‘ಶುದ್ಧ ನೀರು’ ಹೆಸರಿನ ಅಶುದ್ಧ ಆಟ?

## ಸರ್ಕಾರಿ ಘಟಕಗಳು ಬಂದ್; ಖಾಸಗಿ ನೀರಿನದ್ದೇ ಅಬ್ಬರ!



ಜಗಳೂರು: ಒಂದೆಡೆ ಸರ್ಕಾರದ ಅನುದಾನದಲ್ಲಿ ನಿರ್ಮಾಣಗೊಂಡ ಶುದ್ಧ ಕುಡಿಯುವ ನೀರಿನ ಘಟಕಗಳು ಬಹುತೇಕ ಹಳ್ಳಿಗಳಲ್ಲಿ ದುರಸ್ತಿಗೊಂಡು ಬಳಕೆಗೆ ಬಾರದ ಸ್ಥಿತಿಯಲ್ಲಿದ್ದರೆ, ಮತ್ತೊಂದೆಡೆ ಗ್ರಾಮೀಣ ಜನರ ಕುಡಿಯುವ ನೀರಿನ ಅಗತ್ಯವನ್ನು ಬಂಡವಾಳ ಮಾಡಿಕೊಂಡು ಖಾಸಗಿ ಶುದ್ಧ ಕುಡಿಯುವ ನೀರಿನ ಘಟಕಗಳು ಮಿನಿ ಟ್ಯಾಂಕರ್‌ಗಳ ಮೂಲಕ ಹಳ್ಳಿಗಳಿಗೆ ಲಗ್ಗೆ ಇಟ್ಟು ನೀರು ಪೂರೈಸುತ್ತಿರುವುದು ಸಾರ್ವಜನಿಕರ ಗಮನ ಸೆಳೆದಿದೆ. ಕುಡಿಯಲು ಪೂರೈಸುವ ನೀರಿನ ಗುಣಮಟ್ಟದ ಬಗ್ಗೆ ಸಮರ್ಪಕ ಪರಿಶೀಲನೆ ನಡೆಯುತ್ತಿದೆ-ಯೇ ಎಂಬ ಪ್ರಶ್ನೆ ಇದೀಗ ಗಂಭೀರವಾಗಿದೆ.

ಗ್ರಾಮೀಣ ಪ್ರದೇಶಗಳಲ್ಲಿ ಶುದ್ಧ ಕುಡಿಯುವ ನೀರಿನ ಸಮಸ್ಯೆ ಎದುರಾಗುತ್ತಿದ್ದಂತೆ ಖಾಸಗಿ ಘಟಕಗಳಿಗೆ ಬೇಡಿಕೆ ಹೆಚ್ಚಿದೆ. ಮನೆಗಳಿಗೆ ಕ್ಯಾನ್‌ಗಳ ಮೂಲಕ ನೀರು ಪೂರೈಸುವುದರ ಜತೆಗೆ ಕೆಲವು ಘಟಕಗಳಿಂದ ಮಿನಿ ಟ್ಯಾಂಕರ್‌ಗಳ ಮೂಲಕವೂ ಗ್ರಾಮಗಳಿಗೆ ನೀರು ಸಾಗಿಸಲಾಗುತ್ತಿದೆ. ಆದರೆ ಈ ನೀರು ನಿಜವಾಗಿಯೂ ಕುಡಿಯಲು ಯೋಗ್ಯವಾಗಿದೆಯೇ? ನೀರನ್ನು ಯಾವ ಮೂಲದಿಂದ ಪಡೆಯಲಾಗುತ್ತಿದೆ? ಶುದ್ಧೀಕರಣದ ನಂತರ ಪರೀಕ್ಷೆ ಮಾಡಲಾಗುತ್ತಿದೆಯೇ? ಎಂಬ ಪ್ರಶ್ನೆಗಳಿಗೆ ಸಂಬಂಧಪಟ್ಟ ಇಲಾಖೆಗಳು ಸ್ಪಷ್ಟ ಉತ್ತರ ನೀಡಬೇಕಿದೆ.

**ಕೆಳಗೋಟೆಯಲ್ಲಿ ಟ್ಯಾಂಕರ್ ನೀರಿನಲ್ಲಿ ಲಾರ್ವಾ ಪತ್ತೆ:**

ಖಾಸಗಿ ಘಟಕಗಳಿಂದ ಪೂರೈಕೆಯಾಗುತ್ತಿರುವ ನೀರಿನ ಗುಣಮಟ್ಟದ ಬಗ್ಗೆ ಆತಂಕ ಮೂಡಿಸುವ ಘಟನೆ ಇತ್ತೀಚೆಗೆ ಕೆಳಗೋಟೆ ಗ್ರಾಮದಲ್ಲಿ ನಡೆದಿದೆ. ಗ್ರಾಮಕ್ಕೆ ಪೂರೈಕೆಯಾಗಿದ್ದ ಶುದ್ಧ ಕುಡಿಯುವ ನೀರಿನ ಮಿನಿ ಟ್ಯಾಂಕರ್‌ನಲ್ಲಿ ಲಾರ್ವಾಗಳು ಪತ್ತೆಯಾಗಿರುವುದು ಗ್ರಾಮಸ್ಥರ ಆಕ್ರೋಶಕ್ಕೆ ಕಾರಣವಾಗಿತ್ತು.

ಕುಡಿಯಲು ಪೂರೈಸುವ ನೀರಿನಲ್ಲೇ ಲಾರ್ವಾ ಪತ್ತೆಯಾಗಿರುವುದು ನೀರಿನ ಸಂಗ್ರಹಣೆ, ಟ್ಯಾಂಕರ್‌ನ ಸ್ವಚ್ಛತೆ ಹಾಗೂ ನೀರಿನ ಗುಣಮಟ್ಟದ ಮೇಲ್ವಿಚಾರಣೆ ಕುರಿತು ಗಂಭೀರ ಪ್ರಶ್ನೆಗಳನ್ನು ಹುಟ್ಟುಹಾಕಿದೆ. ಘಟನೆ ಬೆಳಕಿಗೆ ಬಂದ ನಂತರವೂ ಇಂತಹ ನೀರಿನ ಪೂರೈಕೆ ವ್ಯವಸ್ಥೆಗಳ ಬಗ್ಗೆ ಅಧಿಕಾರಿಗಳು ಸಮಗ್ರ ಪರಿಶೀಲನೆ ನಡೆಸಬೇಕೆಂಬ ಒತ್ತಾಯ ಕೇಳಿಬರುತ್ತಿದೆ.

**ಸರ್ಕಾರಿ ಘಟಕಗಳು ದುರಸ್ತಿಯಾಗಲಿ:**

ಸರ್ಕಾರಿ ಅನುದಾನದಲ್ಲಿ ನಿರ್ಮಿಸಲಾಗಿರುವ ಶುದ್ಧ ಕುಡಿಯುವ ನೀರಿನ ಘಟಕಗಳು ಕಾರ್ಯನಿರ್ವಹಿಸದಿರುವುದರಿಂದ ಗ್ರಾಮಸ್ಥರು ಅನಿವಾರ್ಯವಾಗಿ ಖಾಸಗಿ ಘಟಕಗಳ ನೀರಿನ ಮೊರೆ ಹೋಗುವ ಪರಿಸ್ಥಿತಿ ನಿರ್ಮಾಣವಾಗಿದೆ.

ಹೀಗಾಗಿ ಖಾಸಗಿ ನೀರಿನ ಘಟಕಗಳ ಮೇಲೆ ಮಾತ್ರ ಅವಲಂಬಿತರಾಗುವ ಬದಲು, ಸರ್ಕಾರಿ ಘಟಕಗಳನ್ನು ತಕ್ಷಣ ದುರಸ್ತಿಪಡಿಸಿ ಜನರಿಗೆ ಸ್ಥಳೀಯವಾಗಿ ಗುಣಮಟ್ಟದ ಕುಡಿಯುವ ನೀರು ಒದಗಿಸುವ ವ್ಯವಸ್ಥೆ ಮಾಡಬೇಕು ಎಂಬುದು ಗ್ರಾಮಸ್ಥರ ಪ್ರಮುಖ ಬೇಡಿಕೆಯಾಗಿದೆ.

**‘RO ನೀರು’ ಎಂದರೆ ಗುಣಮಟ್ಟದ ಖಾತರಿಯೇ?:**

ಖಾಸಗಿ ಘಟಕದಲ್ಲಿ RO ಸೇರಿದಂತೆ ವಿವಿಧ ವಿಧಾನಗಳಿಂದ ನೀರನ್ನು ಶುದ್ಧೀಕರಿಸಲಾಗುತ್ತಿದೆ ಎಂಬ ಕಾರಣಕ್ಕೆ ಮಾತ್ರ ಅದು ಸುರಕ್ಷಿತ ಎಂದು ಪರಿಗಣಿಸಲಾಗದು. ನೀರಿನ ಮೂಲ, ಶುದ್ಧೀಕರಣ ಪ್ರಕ್ರಿಯೆ, ಸಂಗ್ರಹಣೆ ಹಾಗೂ ವಿತರಣೆಯ ಪ್ರತಿಯೊಂದು ಹಂತದಲ್ಲೂ ನೈರ್ಮಲ್ಯ ಕಾಪಾಡುವುದು ಅಗತ್ಯ. ವಿಶೇಷವಾಗಿ ಮಿನಿ ಟ್ಯಾಂಕರ್‌ಗಳ ಮೂಲಕ ನೀರು ಪೂರೈಸುವ ಸಂದರ್ಭದಲ್ಲಿ ಟ್ಯಾಂಕರ್‌ಗಳನ್ನು ಎಷ್ಟು ಬಾರಿ ಸ್ವಚ್ಛಗೊಳಿಸಲಾಗುತ್ತದೆ? ನೀರು ತುಂಬುವ ಮೊದಲು ಮತ್ತು ನಂತರ ಟ್ಯಾಂಕರ್‌ಗಳ ನೈರ್ಮಲ್ಯ ಕಾಪಾಡಲಾಗುತ್ತಿದೆಯೇ? ನೀರಿನ ಪರೀಕ್ಷಾ ವರದಿ ಇದೆಯೇ? ಎಂಬುದನ್ನು ಅಧಿಕಾರಿಗಳು ಪರಿಶೀಲಿಸಬೇಕಿದೆ.

**ಜನರ ಆರೋಗ್ಯದೊಂದಿಗೆ ಚೆಲ್ಲಾಟ ಸರಿಯಲ್ಲ!!:**

ಶುದ್ಧ ಕುಡಿಯುವ ನೀರು ಪ್ರತಿಯೊಬ್ಬರ ಮೂಲಭೂತ ಅಗತ್ಯ. ನೀರಿನ ಕೊರತೆಯಿಂದ ಗ್ರಾಮಸ್ಥರು ಖಾಸಗಿ ಘಟಕಗಳ ನೀರನ್ನು ಅನಿವಾರ್ಯವಾಗಿ ಅವಲಂಬಿಸುವ ಪರಿಸ್ಥಿತಿಯನ್ನು ಬಳಸಿಕೊಂಡು ಗುಣಮಟ್ಟದಲ್ಲಿ ರಾಜಿ ಮಾಡಿಕೊಳ್ಳುವುದು ಅಪಾಯಕಾರಿ.

ಕೆಳಗೋಟೆಯಲ್ಲಿ ಟ್ಯಾಂಕರ್‌ನಲ್ಲೇ ಲಾರ್ವಾ ಪತ್ತೆಯಾಗಿರುವ ಘಟನೆ ಅಧಿಕಾರಿಗಳಿಗೆ ಎಚ್ಚರಿಕೆಯ ಗಂಟೆಯಾಗಬೇಕಿದೆ.

ಸರ್ಕಾರಿ ಶುದ್ಧ ಕುಡಿಯುವ ನೀರಿನ ಘಟಕಗಳನ್ನು ದುರಸ್ತಿಪಡಿಸುವುದರ ಜತೆಗೆ ಖಾಸಗಿ ಘಟಕಗಳ ಕಾರ್ಯವೈಖರಿ ಮತ್ತು ನೀರಿನ ಗುಣಮಟ್ಟದ ಬಗ್ಗೆ ನಿಯಮಿತವಾಗಿ ಪರಿಶೀಲನೆ ನಡೆಸಬೇಕು. ತಪ್ಪಿತಸ್ಥ ಘಟಕಗಳ ವಿರುದ್ಧ ಕಾನೂನು ಕ್ರಮ ಕೈಗೊಂಡು, “ಶುದ್ಧ ನೀರು” ಎಂಬ ಹೆಸರಿನಲ್ಲಿ ಜನರ ಆರೋಗ್ಯದೊಂದಿಗೆ ಯಾವುದೇ ಕಾರಣಕ್ಕೂ ರಾಜಿ ಮಾಡಿಕೊಳ್ಳದಂತೆ

ತಾಲೂಕು ಆಡಳಿತ ಹಾಗೂ ಜನಪ್ರತಿನಿಧಿಗಳು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂಬುದು ಸಾರ್ವಜನಿಕರ ಆಗ್ರಹವಾಗಿದೆ.

### ಯಾವ ಇಲಾಖೆಗಳು ಪರಿಶೀಲಿಸಬೇಕು?:

**ಜಗಳೂರು ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಸಗಿ ಶುದ್ಧ ಕುಡಿಯುವ ನೀರಿನ ಘಟಕಗಳ ಸಂಪೂರ್ಣ ಪಟ್ಟಿ ಸಿದ್ಧಪಡಿಸಿ, ಅವುಗಳ ಅನುಮತಿ, ನೀರಿನ ಮೂಲ, ನೀರಿನ ಗುಣಮಟ್ಟದ ಪರೀಕ್ಷಾ ವರದಿ, ಶುದ್ಧೀಕರಣ ವ್ಯವಸ್ಥೆ, ಕ್ಯಾನ್ ಹಾಗೂ ಮಿನಿ ಟ್ಯಾಂಕರ್‌ಗಳ ಸ್ವಚ್ಛತೆ ಮತ್ತು ತ್ಯಾಜ್ಯ ನೀರಿನ ವಿಲೇವಾರಿ ಕುರಿತು ಸಮಗ್ರ ಪರಿಶೀಲನೆ ನಡೆಸಬೇಕಿದೆ.**

**ಈ ನಿಟ್ಟಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ (ಖಆಘಖಅ), ಸಂಬಂಧಪಟ್ಟ ಗ್ರಾಮ ಪಂಚಾಯಿತಿಗಳು ಹಾಗೂ ಪಿಡಿಒಗಳು, ಪಟ್ಟಣ ಪ್ರದೇಶದಲ್ಲಿ ಪಟ್ಟಣ ಪಂಚಾಯಿತಿ, ನೀರಿನ ಗುಣಮಟ್ಟ ಮತ್ತು ಸಾರ್ವಜನಿಕ ಆರೋಗ್ಯದ ದೃಷ್ಟಿಯಿಂದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಪರಿಶೀಲನೆ ನಡೆಸಿ ವಾಸ್ತವ ಸ್ಥಿತಿಯನ್ನು ಬಹಿರಂಗ ಪಡಿಸಬೇಕು.**

# ಶಾಲೆ-ಮನೆ-ಸಮಾಜ-ಸರ್ಕಾರ ನಾಲ್ಕು ಅಂಗಗಳು ಒಂದೇ ವೇದಿಕೆಯಲ್ಲಿ ಬೆಸೆಯುವ ಯತ್ನ



ವಿಜಯನಗರ : ಮಕ್ಕಳಿಗೆ ಶೈಕ್ಷಣಿ ಅರಿವು ಕಾರ್ಯಕ್ರಮದ ಮೂಲಕ ಶಾಲೆ-ಮನೆ-ಸಮಾಜ-ಸರ್ಕಾರ ಎಂಬ ನಾಲ್ಕು ಪ್ರಮುಖ ಅಂಗಗಳನ್ನು ಒಂದೇ ವೇದಿಕೆಯಲ್ಲಿ ಬೆಸೆಯುವ ಸತ್ಪ್ರಯತ್ನವಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಬಿ. ಉಮಾಪತಿ ಅಭಿಪ್ರಾಯ ವ್ಯಕ್ತಪಡಿಸಿದರು.

ನಗರದ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ವಿನೋಬಾ ಭಾವೆ ಶಾಲೆಯಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಮತ್ತು ಎಎಂಪಿ ಅಜ್ಜಯ್ಯ ಸಮಾಜಮುಖಿ ಟ್ರಸ್ಟ್ ರಿಜಿಸ್ಟರ್ ಹೊಳಗುಂದಿ ಹಾಗೂ ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಳ್ಳಲಾಗಿದ್ದ, ಶಾಲಾ ಮಕ್ಕಳಿಗೆ ಶೈಕ್ಷಣಿ ಅರಿವು ಕಾರ್ಯಕ್ರಮವನ್ನು ಉದ್ದೇಶಿಸಿ ಅವರು ಮಾತನಡಿದರು.

ಅರಿವು ಕಾರ್ಯಕ್ರಮದ ಮೂಲಕ ಆರೋಗ್ಯ, ಸ್ವಚ್ಛತೆ, ಬಾಲ್ಯ ವಿವಾಹ ತಡೆ, ಡಿಜಿಟಲ್ ಸುರಕ್ಷತೆ ಮತ್ತು ಸರ್ಕಾರದ ವಿವಿಧ ಸೌಲಭ್ಯಗಳ ಬಗ್ಗೆ ಮಕ್ಕಳಿಗೆ ಅರಿವು ಮೂಡಿಸುವುದು ನಮ್ಮ ಗುರಿ ಎಂದ ಅವರು, ಮಕ್ಕಳ ಶೈಕ್ಷಣಿಕ ಪ್ರಗತಿಗೆ ಸಮುದಾಯ ಹಾಗೂ ವಿವಿಧ ಇಲಾಖೆಗಳ ಒಗ್ಗಟ್ಟಿನ ಶ್ರಮ ಅತ್ಯಗತ್ಯ ಎಂದು ಹೇಳಿದರು.

ಆರ್‌ಟಿಐ ರಾಜ್ಯ ಮಟ್ಟದ ಸಂಪನ್ಮೂಲ ವ್ಯಕ್ತಿ ವಾಗೀಶ್ ಮಾತನಾಡಿ, ಶಿಕ್ಷಣವು ಪ್ರತಿಯೊಬ್ಬ ನಾಗರಿಕನ ಮೂಲಭೂತ ಹಕ್ಕಾಗಿದ್ದು, ಯಾವುದೇ ಮಗು ಶಿಕ್ಷಣದಿಂದ ವಂಚಿತವಾಗದಂತೆ ನೋಡಿಕೊಳ್ಳುವುದು ಸಮಾಜದ ಜವಾಬ್ದಾರಿಯಾಗಿದೆ. ಸಮಗ್ರ ಸಮಾಜದ ವಿಕಾಸ ಹಾಗೂ ದೇಶದ ಆರ್ಥಿಕ ಪ್ರಗತಿಗೆ ಗುಣಮಟ್ಟದ ಶಿಕ್ಷಣವೇ ಮೂಲಸ್ತಂಭವಾಗಿದೆ ಕೇವಲ ಪುಸ್ತಕದ ಜ್ಞಾನಕ್ಕೆ ಸೀಮಿತವಾಗದೆ, ವ್ಯಕ್ತಿಯಲ್ಲಿ ಶಿಸ್ತು, ವೈಜ್ಞಾನಿಕ ಮನೋಭಾವ ಮತ್ತು ಸಾಮಾಜಿಕ ಜವಾಬ್ದಾರಿಯನ್ನು ಬೆಳೆಸುವ ಕಾರ್ಯವನ್ನು ಶಿಕ್ಷಣ ಮಾಡುತ್ತದೆ ಎಂದರು.

ಇದೇ ಸಂದರ್ಭದಲ್ಲಿ ಆರ್‌ಟಿಐ ರಾಜ್ಯ ಮಟ್ಟದ ಸಂಪನ್ಮೂಲ ವ್ಯಕ್ತಿ ವಾಗೀಶ್ ಅವರು ವಿನೋಬಾ ಭಾವೆ ಶಾಲಾ ಅಭಿವೃದ್ಧಿಗೆ ವೈಯಕ್ತಿಕವಾಗಿ ರೂ.1 ಲಕ್ಷ ಸಹಯಧಾನ ನೀಡಿದರು.

ಸಮಾರಂಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪ ನಿರ್ದೇಶಕ ಗಂಗಪ್ಪ, ತಾಲೂಕು ವೈದ್ಯಾಧಿಕಾರಿ ವಿನೋದ್, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯ ವಿಸ್ತರಣಾಧಿಕಾರಿ ಮಂಜುನಾಥ, ಹಿರಿಯ ಶಿಕ್ಷಕರಾದ ಬಸವರಾಜ್, ಸಿಆರ್‌ಪಿಗಳಾದ ಮಹಮ್ಮದ್ ಇಮ್ರಾನ್, ಮಾಬು ಭಾಷಾ, ಎಸ್.ಡಿ.ಎಮ್.ಸಿ. ಅಧ್ಯಕ್ಷರಾದ ಬಾಬು ಮಾತನಾಡಿ, ದೈಹಿಕ ಶಿಕ್ಷಕ ಜಾಕೀರ ಹುಸೇನ್ ಹಾಗೂ ಎಸ್.ಡಿ.ಎಮ್.ಸಿ. ಪದಾಧಿಕಾರಿಗಳು ಉಪಸ್ಥಿತರಿದ್ದರು.

# ಮಲ್ಲಿಕಾರ್ಜುನ ಖರ್ಗೆ ಅವಮಾನ ಖಂಡಿಸಿ ದಲಿತ ಸಂಘರ್ಷ ಸಮಿತಿ ಪ್ರತಿಭಟನೆ



ವಿಜಯಪುರ, ಆ. 21: ರಾಜ್ಯಸಭೆ ವಿರೋಧ ಪಕ್ಷದ ನಾಯಕ ಹಾಗೂ ಕಾಂಗ್ರೆಸ್ ರಾಷ್ಟ್ರೀಯ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರಿಗೆ ಅವಮಾನ ಮಾಡಿರುವುದನ್ನು ಖಂಡಿಸಿ ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ (ಡಾ. ಡಿ.ಆರ್. ಸಾಗರ ಬಣ) ವಿಜಯಪುರ ಜಿಲ್ಲಾ ಸಮಿತಿ ವತಿಯಿಂದ ನಗರದಲ್ಲಿನ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಿಂದ ಜಿಲ್ಲಾಧಿಕಾರಿ ಕಚೇರಿವರೆಗೆ ಬೃಹತ್ ಪ್ರತಿಭಟನಾ ಮೆರವಣಿಗೆ ನಡೆಸಿ ಜಿಲ್ಲಾಧಿಕಾರಿ ಡಾ. ಆನಂದ್ ಅವರ ಮೂಲಕ ಪ್ರಧಾನಮಂತ್ರಿ ನರೇಂದ್ರ ಮೋದಿ ಅವರಿಗೆ ಮನವಿ ಸಲ್ಲಿಸಲಾಯಿತು.

ಈ ಸಂದರ್ಭದಲ್ಲಿ ಮಾತನಾಡಿದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಜಿಲ್ಲಾ ಸಂಚಾಲಕ ಸಿದ್ದು ರಾಯಣ್ಣ ಅವರು, ಅಸಮಾನತೆ ಹಾಗೂ ಅವಮಾನವನ್ನು ವಿರೋಧಿಸಿ ಜೀವನವಿಡೀ ಹೋರಾಡಿದ ಡಾ. ಬಿ.ಆರ್. ಅಂಬೇಡ್ಕರ್ ಅವರ ಆಶಯಗಳನ್ನು ಸಂವಿಧಾನದ ಮೂಲಕ ಸಾಕಾರಗೊಳಿಸಲಾಗಿದೆ. ಆದರೆ ಸಂವಿಧಾನ ಜಾರಿಯಾಗಿ 77 ವರ್ಷಗಳಾದರೂ ದೇಶದಲ್ಲಿ ಅಸ್ಪೃಶ್ಯತೆ ಇನ್ನೂ ಜೀವಂತವಾಗಿರುವುದು ವಿಷಾದನೀಯ ಎಂದರು.

ಉತ್ತರಾಖಂಡದ ರಾಮಲೀಲಾ ಮೈದಾನದಲ್ಲಿ ಆ.8ರಂದು ನಡೆದ ಕಾರ್ಯಕ್ರಮದಲ್ಲಿ ಮಲ್ಲಿಕಾರ್ಜುನ ಖರ್ಗೆ ಅವರು ಭಾಷಣ ಮಾಡಿದ ಸ್ಥಳವನ್ನು ನಂತರ ಕೆಲವರು ಸ್ವಚ್ಛಗೊಳಿಸಿ ಹೋಮ-ಹವನ ನಡೆಸಿರುವುದು ಅತ್ಯಂತ ಖಂಡನೀಯ. ಜಾತಿಯ ಹಿನ್ನೆಲೆಯಲ್ಲಿ ಈ ರೀತಿಯ ಕೃತ್ಯ ಎಸಗುವ ಮೂಲಕ ರಾಷ್ಟ್ರೀಯ ನಾಯಕರಿಗೆ ಅವಮಾನ ಮಾಡಲಾಗಿದೆ ಎಂದು ಅವರು ಆರೋಪಿಸಿದರು. 1927ರಲ್ಲಿ ಮಹಾಡ್ ಚೌದರ್ ಕೆರೆಯ ನೀರನ್ನು ದಲಿತರು ಕುಡಿದ ಸಂದರ್ಭದಲ್ಲಿ ಮೇಲ್ಜಾತಿಯವರು ಗೋಮೂತ್ರ ಹಾಗೂ ಸೆಗಣಿಯನ್ನು ಹಾಕಿ ನೀರನ್ನು ‘ಶುದ್ಧೀಕರಿಸಿದ’ ಘಟನೆ ಸೇರಿದಂತೆ ಅಸ್ಪೃಶ್ಯತೆಯ ವಿರುದ್ಧ ಡಾ. ಅಂಬೇಡ್ಕರ್ ನಡೆಸಿದ ಹೋರಾಟವನ್ನು ಸ್ಮರಿಸಿದ ಅವರು, ಇಂತಹ ಅಮಾನವೀಯ ಪದ್ಧತಿಗಳು ಮತ್ತೆ ತಲೆದೋರುವುದನ್ನು ತಡೆಯಬೇಕಾಗಿದೆ ಎಂದು ಹೇಳಿದರು.

ಜಾತಿ ಆಧಾರಿತ ಅಸ್ಪೃಶ್ಯತೆ ಆಚರಿಸುವವರ ವಿರುದ್ಧ ದೇಶದ್ರೋಹ ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಮೇಲಿನ ದೌರ್ಜನ್ಯ ತಡೆ ಕಾಯ್ದೆ ಸೇರಿದಂತೆ ಸೂಕ್ತ ಕಾನೂನುಗಳಡಿ ಪ್ರಕರಣ ದಾಖಲಿಸಿ, ಆರೋಪಿಗಳನ್ನು ಬಂಧಿಸಿ ಕಠಿಣ ಶಿಕ್ಷೆಗೆ ಗುರಿಪಡಿಸಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಮಲ್ಲಿಕಾರ್ಜುನ ಖರ್ಗೆ ಅವರು ದಲಿತ ಹಾಗೂ ಶೋಷಿತ ಸಮುದಾಯದಿಂದ ಬೆಳೆದು ರಾಷ್ಟ್ರೀಯ ನಾಯಕತ್ವಕ್ಕೆ ಏರಿದ ವ್ಯಕ್ತಿಯಾಗಿದ್ದಾರೆ. ಅವರ ವ್ಯಕ್ತಿತ್ವಕ್ಕೆ ಕಳಂಕ ತರುವ ಯಾವುದೇ ಪ್ರಯತ್ನವನ್ನು ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ ಸಹಿಸುವುದಿಲ್ಲ. ಸರ್ಕಾರ ಕೂಡಲೇ ಕ್ರಮ ಕೈಗೊಳ್ಳದಿದ್ದರೆ ಮುಂದಿನ ದಿನಗಳಲ್ಲಿ ರಾಜ್ಯ ಹಾಗೂ ರಾಷ್ಟ್ರಮಟ್ಟದಲ್ಲಿ ಉಗ್ರ ಹೋರಾಟ ನಡೆಸಲಾಗುವುದು ಎಂದು ಎಚ್ಚರಿಕೆ ನೀಡಿದರು.ಪ್ರತಿಭಟನೆಯಲ್ಲಿ ಮಹಾಂತೇಶ ಸಾಸಬಾಳ, ರಾಜಕುಮಾರ ಕಳ್ಳಿಮನಿ, ದೇವೇಂದ್ರ ಬಾವಿಮನಿ, ಚಂದ್ರಶೇಖರ, ಸುರೇಶ ಶೇಗುಣಸಿ, ಪರಶುರಾಮ ಬೆಕಿನಾಳ, ಶಿವಕುಮಾರ ಗಣಿಹಾರ, ನಾಗೇಶ ರೆಡ್ಡಿ, ತಮಣ್ಣ, ಪರಸು ಇಂಗಳಗಿ, ದುಂಡಪ್ಪ ನಾಟಿಕಾರ, ಗಂಗಾಧರ ಬೇನೂರ, ವಿಜಯಕುಮಾರ ಕ್ಯಾತನ್, ಗೋಪಾಲ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಕೊಪ್ಪಳ : ಬಾಲಕಿ ಮೇಲೆ ಅತ್ಯಾಚಾರ; ಘಟನೆ ನಡೆದು ವರ್ಷದ ಬಳಿಕ ದೂರು ನೀಡಿದ ಪೋಷಕರು

ಕೊಪ್ಪಳ: ಜಿಲ್ಲೆಯ ಗ್ರಾಮವೊಂದರಲ್ಲಿ ಪ್ರೌಢಶಾಲೆ ಓದುತ್ತಿದ್ದ ಬಾಲಕಿ ಮೇಲೆ ಅತ್ಯಾಚಾರ ನಡೆದಿದೆ ಎಂದು ಪೋಷಕರು ಆರೋಪಿಸಿದ್ದಾರೆ. ಘಟನೆ ನಡೆದು ಒಂದು ವರ್ಷದ ಬಳಿಕ ಇಲ್ಲಿನ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ.




ಒಂದು ವರ್ಷದ ಹಿಂದೆ ಮಗಳು ಕೊಪ್ಪಳದ ಬಸ್ ನಿಲ್ದಾಣದಲ್ಲಿದ್ದಾಗ ಹರ್ಷಾ ಎನ್ನುವ ಯುವಕ ಬೈಕ್ ಮೇಲೆ ಮಗಳನ್ನು ಕರೆದುಕೊಂಡು ಹೋಗಿದ್ದ. ಮತ್ತು ಬರುವ ಜ್ಯೂಸ್ ಕುಡಿಸಿ ಗ್ರಾಮವೊಂದರ ಹೊರವಲಯಕ್ಕೆ ಕರೆದು-ಕೊಂಡು ಹೋಗಿ ಅತ್ಯಾಚಾರ ಎಸಗಿ ಅದನ್ನು ವಿಡಿಯೊ ಚಿತ್ರೀಕರಣ ಮಾಡಿಕೊಂಡಿದ್ದ. ಆ ವಿಡಿಯೊವನ್ನು ನನ್ನ ಮಗಳ ಮೊಬೈಲ್‌ಗೆ ಕಳುಹಿಸಿ ಲೈಂಗಿಕವಾಗಿ ಸಹಕರಿಸಬೇಕೆಂದು ಹಲವು ಬಾರಿ ವ್ಯಾಟ್ಸ್‌ಪ್ ಕರೆ ಮಾಡಿ ಬೇಡಿಕೆ ಇಟ್ಟಿದ್ದು, ಅದನ್ನು ಸ್ಕ್ರೀನ್ ರೆಕಾರ್ಡ್ ಮಾಡಿಕೊಂಡಿದ್ದ. ಆ ವಿಡಿಯೊವನ್ನು ಸ್ನೇಹಿತರೊಂದಿಗೆ ಹಂಚಿಕೊಂಡಿದ್ದಾನೆ ಎಂದು ದೂರಿನಲ್ಲಿ ತಿಳಿಸಲಾಗಿದೆ. 2025ರ ಅಕ್ಟೋಬರ್ 10ರಂದು ಘಟನೆ ನಡೆದಿದ್ದು ಇದೇ 8ರಂದು ಬಾಲಕಿಯ ತಾಯಿ ನೀಡಿದ ದೂರಿನ ಮೇರೆಗೆ ಗ್ರಾಮೀಣ ಪೊಲೀಸ್ ಠಾಣೆಯಲ್ಲಿ ಪೋಕ್ಸೊ ಕಾಯ್ದೆಯಡಿ ಪ್ರಕರಣ ದಾಖಲಾಗಿದೆ. ಎಫ್‌ಐಆರ್ ನಲ್ಲಿ ಹರ್ಷಾ ಹಾಗೂ ಕಿರಣ ಎಂಬ ಇಬ್ಬರ ಹೆಸರುಗಳನ್ನು ಮಾತ್ರ ದೂರುದಾರರು ತಿಳಿಸಿದ್ದರು. ವಿಡಿಯೊ ವೈರಲ್ ಮಾಡಿದ ಕಾರಣಕ್ಕಾಗಿ ಒಟ್ಟು ಏಳು ಜನರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಲಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರಸಿದ್ದಿ ತಿಳಿಸಿದರು.

# ನಾಗೇಂದ್ರ ಕಣ್ಣೀರನ್ನು ಜನ ನಂಬುವುದಿಲ್ಲ: ಶಾಸಕ ಗಾಲಿ ಜನಾರ್ಧನ ರೆಡ್ಡಿ



ಬಳ್ಳಾರಿ: ಮಾಜಿ ಸಚಿವ, ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಗುರುವಾರದಂದು ವಾಲ್ಮೀಕಿ ಜಯಂತಿಯ ಕಾರ್ಯಕ್ರಮದಲ್ಲಿ ಕಣ್ಣೀರು ಹಾಕಿರುವುದು, ತಾನು ಮಾಡಿದ ತಪ್ಪಿಗಾಗಿ ಹಾಕಿದ ಪಶ್ಚಾತ್ತಾಪದ ಕಣ್ಣೀರು. ಅವರ ಕಣ್ಣೀರನ್ನು ಜಿಲ್ಲೆಯ ಜನರು ಯಾರೂ ನಂಬುವ ಸ್ಥಿತಿಯಲ್ಲಿ ಇಲ್ಲ ಎಂದು ಬಿಜೆಪಿ ಧುರೀಣ, ಗಂಗಾವತಿ ಶಾಸಕ ಜಿ.ಜನಾರ್ದನರೆಡ್ಡಿ ಹೇಳಿದ್ದಾರೆ.

ಸಂಡೂರು ಪಟ್ಟಣದಲ್ಲಿ ಉಪ ಚುನಾವಣೆ ಪ್ರಯುಕ್ತ ನೂತನ ಮನೆ ಹಾಗೂ ಪ್ರಚಾರ ಕಛೇರಿಗೆ ಪೂಜೆ ನೆರವೇರಿಸಿದ ನಂತರ, ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ನಾಗೇಂದ್ರ ಏನೇ ಹೇಳಿದರೂ, ಕಣ್ಣೀರು ಹಾಕಿದರೂ ಜನರು ನಂಬುವುದಿಲ್ಲ. ಕಾಂಗ್ರೆಸ್ ಪಕ್ಷವು ಅವರನ್ನು ಸಂಪೂರ್ಣವಾಗಿ ಬಳಕೆ ಮಾಡಿಕೊಂಡಿದೆ ಎಂದರು.

ವಾಲ್ಮೀಕಿ ನಿಗಮದ ಹಗರಣದಲ್ಲಿ ಮಾಡಿದ ತಪ್ಪಿಗೆ ಕಣ್ಣೀರು ಹಾಕಿರಬಹುದು. ಯಾ-ರೇ ಆಗಲೀ, ತಪ್ಪು ಮಾಡಿದರೆ ಶಿಕ್ಷೆ ಅನುಭವಿಸಲೇಬೇಕು. ರಾಜಕೀಯವಾಗಿ ನಾಗೇಂದ್ರರನ್ನು ಬೆಳೆಸಿದ್ದೇ ನಾವು. ಇಂತಹವರನ್ನು ನಾವು ಬೆಳೆಸಿದ್ದೇವೆಯೇ ಎಂದು ನಾನು ಈಗ ಪಶ್ಚಾತ್ತಾಪ ಪಡುವಂತಾಗಿದೆ. ವಾಲ್ಮೀಕಿ ನಿಗಮದ ಹಗರಣ ಹಾಗೂ ಅದರಲ್ಲಿ ನಾಗೇಂದ್ರ ಪಾತ್ರದ ಬಗೆ ‘ಇಡಿ’ ಸಲ್ಲಿಸಿರುವ ‘ಚಾರ್ಜ್‌ಶೀಟ್’ಗಳಲ್ಲಿನ ವಿವರಗಳೆಲ್ಲವನ್ನೂ ಪ್ರತ್ಯೇಕವಾಗಿ ಪುಸ್ತಕದ ರೂಪದಲ್ಲಿ ಮುದ್ರಿಸಿ, ಶೀಘ್ರವೇ ಬಿಡುಗಡೆ ಮಾಡಲಾಗುತ್ತದೆ ಎಂದರು.

ಎರಡು ದಿನದಲ್ಲಿ ಫೈನಲ್: ಸಂಡೂರು ಉಪ ಚುನಾವಣೆಯಲ್ಲಿ ಸ್ಪರ್ಧಿಸಲು ಬಯಸಿ, ಬಿಜೆಪಿಯಿಂದ 19 ಜನ ಟಿಕೆಟ್ ಆಕಾಂಕ್ಷಿಗಳಿದ್ದಾರೆ. ಇನ್ನೆರಡು ದಿನಗಳಲ್ಲಿ ಟಿಕೆಟ್ ಯಾರಿಗೆ ಎಂಬುದು ಫೈನಲ್ ಆಗಲಿದೆ. ಯಾರಿಗೇ ಟಿಕೆಟ್ ಸಿಕ್ಕರೂ ಅವರನ್ನು ಗೆಲ್ಲಿಸಲು ಎಲ್ಲರೂ ಒಗ್ಗಟ್ಟಿನಿಂದ ಶ್ರಮಿಸುತ್ತೇವೆ ಎಂದು ಜನಾರ್ದನರೆಡ್ಡಿ ಸ್ಪಷ್ಟವಾಗಿ ನುಡಿದರು.

ಬಳ್ಳಾರಿ ಜಿಲ್ಲೆಯಲ್ಲಿ ಓರ್ವ ಬಿಜೆಪಿ ಶಾಸಕರನ್ನು ಗೆಲ್ಲಿಸಿಕೊಡಿ. ಅಭಿವೃದ್ಧಿ ಮಾಡಿ ತೋರಿಸುತ್ತಾರೆ. ಸಂಡೂರು ಕ್ಷೇತ್ರದ ಗೆಲುವಿನಿಂದ ಬಳ್ಳಾರಿ ಜಿಲ್ಲೆಯಲ್ಲಿ ‘ಬಿಜೆಪಿ’ಯ ವಿಜಯದ ಪರಂಪರೆ ಪ್ರಾರಂಭವಾಗಲಿದ್ದು, ಮುಂದಿನ ವಿಧಾನಸಭೆ ಚುನಾವಣೆಯಲ್ಲಿ ಐದೂ ಕ್ಷೇತ್ರಗಳಲ್ಲಿ ಬಿಜೆಪಿ ಜಯಭೇರಿ ಬಾರಿಸುವುದು ನಿಶ್ಚಿತ ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಬಳ್ಳಾರಿ ನಗರ ಮಾಜಿ ಶಾಸಕ ಗಾಲಿ ಸೋಮಶೇಖರರೆಡ್ಡಿ, ಜಿಲ್ಲಾ ಬಿಜೆಪಿ ಅಧ್ಯಕ್ಷ ಅನಿಲ್‌ನಾಯ್ಡು, ರಾಜ್ಯ ಬಿಜೆಪಿ ಕಾರ್ಯದರ್ಶಿ ಶರಣು ತಳಿಕೇರಿ, ಎಸ್‌ಟಿ ಮೋರ್ಚಾ ರಾಜ್ಯಾಧ್ಯಕ್ಷ ಬಂಗಾರ ಹನುಮಂತು, ಮುಖಂಡರಾದ ಜಿ.ಟಿ.ಪಂಪಾಪತಿ, ದಮ್ಮೂರು ಶೇಖರ್, ನಾನಾಸಾಹೇಬ್‌ನಿಕ್ಕಂ, ರಘು, ಬಿಜೆಪಿ ಟಿಕೆಟ್ ಪ್ರಬಲ ಆಕಾಂಕ್ಷಿ ಕೆ.ಎಸ್.ದಿವಾಕರ್, ಮತ್ತಿತರೆ ಪ್ರಮುಖರು ಉಪಸ್ಥಿತರಿದ್ದರು.

EDITOR : S VENKATESULU, D.NO.: 4/38, MAIN ROAD, SETTUR, ANANTHAPUR, ANDHRA PRADESH - 515767, PUBLISHER : S VENKATESULU 237, Ward No 22 Talur Road, Lingamma Compund, Bellary, Bellary, Karnataka - 583101. KARNATAKA - 583113.
OWNER : S VENKATESULU D.NO.: 4/38, MAIN ROAD, SETTUR, ANANTHAPUR, ANDHRA PRADESH - 515767. PRINTER: VADDARA DODDA VEERESH, 1ST WARD, NAYAKARA ONI, AGASARA ONI, AT/POST-SOMALAPURA, BELLARY, KARNATAKA - 583101.